# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 200 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 24–02–2024 ಶನಿವಾರ | ಪುಟ: 4 | ಬೆಲೆ : ರೂ.2–00

Volume - 01 Issue - 200 | Title- Code: KARKAN 28269 | Chitradurga | Date: 24-02-2024 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ರಾಜ್ಯಾದ್ಯಂತ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸಾ ದರಪಟ್ಟಿ ಪ್ರಕಟಿಸುವುದು ಕಡ್ಡಾಯ: ಸರ್ಕಾರ 2

ಸಾಮಾಜಿಕ ಮಾಧ್ಯಮ ಸುದ್ದಿಯ ಮೇಲೆ ನಿಗಾ ಇರಿಸಿ: ಜಿಲ್ಲಾಧಿಕಾರಿ 3

ನೀರಿನ ಅಸಮರ್ಪಕ ಬಳಕೆಯಿಂದ ಬರ ಪ್ರತಿಯೊಬ್ಬರು ಜಲಸಂರಕ್ಷಣೆಗೆ ಒತ್ತು ನೀಡಿ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಸಂವಿಧಾನ ಜಾಗೃತಿ ಜಾಥಾದ ರಾಷ್ಟ್ರೀಯ ಮಟ್ಟದ ಕಾರ್ಯಕ್ರಮಕ್ಕೆ ಉಚಿತ ಬಸ್ ವ್ಯವಸ್ಥೆ

» ಚಿತ್ರದುರ್ಗ

ಬೆಂಗಳೂರಿನಲ್ಲಿ ನಡೆಯಲಿರುವ "ಸಂವಿಧಾನ ಜಾಗೃತಿಜಾಥಾ'ದರಾಷ್ಟ್ರೀಯಮಟ್ಟದಕಾರ್ಯಕ್ರಮಕ್ಕೆ ಉಚಿತವಾಗಿ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರಾದ ವಿ.ಕೃಷ್ಣಮೂರ್ತಿ ತಿಳಿಸಿದ್ದಾರೆ. ಇಂದು ನಡೆಯಲಿರುವ ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ ಸಂವಿಧಾನ ಜಾಗೃತಿ ಜಾಥಾದ ಐಕ್ಯತಾ ಸಮಾವೇಶಕ್ಕೆ ಚಿತ್ರದುರ್ಗ ತಾಲ್ಲೂಕಿನ ಚುನಾಯಿತ ಪ್ರತಿನಿಧಿಗಳು, ದಲಿತಪರ ಸಂಘಟನೆಗಳ ಪದಾಧಿಕಾರಿಗಳು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಪಿ.ಡಿ.ಓ ಮತ್ತು ಸಮಾಜ ಕಲ್ಯಾಣ ಇಲಾಖಾ ಮತ್ತು ಗ್ರಾಮ ಪಂಚಾಯತ್ ಸಿಬ್ಬಂದಿಗಳು ಭಾಗವಹಿಸಲು ತಿಳಿಸಿರುವುದರಿಂದ ಚಿತ್ರದುರ್ಗ ತಾಲ್ಲೂಕಿಗೆ ಒಟ್ಟು 06ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ. ತಾಲ್ಲೂಕಿನ ಪ್ರತಿ ಹೋಬಳಿಗೆ ಒಂದು ಬಸ್, ಹೋಬಳಿ ಕೇಂದ್ರಸ್ಥಾನದ ಗ್ರಾಮ ಪಂಚಾಯತ್ ಮುಂಭಾಗದಿಂದ ಬೆಳಗ್ಗೆ 7:30ಗಂಟೆಗೆ ಬಸ್ ಹೊರಡಲಿದೆ.ಕಸಬಾ ಹೋಬಳಿಯ 03ಬಸ್‌ಗಳಿದ್ದು, 3ಬಸ್ ಮುರುಘರಾಜೇಂದ್ರ ಕ್ರೀಡಾಂಗಣದ ಬಳಿ ಇರಲಿದೆ. ತುರುವನೂರು ಹೋಬಳಿ ಬಸ್ ಗ್ರಾ.ಪಂ. ಆವರಣ, ತುರುವನೂರು ಇಲ್ಲಿ ಇರಲಿದ್ದು, ಭರಮಸಾಗರ ಹೋಬಳಿ ಬಸ್ ಗ್ರಾ.ಪಂ. ಕಛೇರಿ ಆವಣ ಭರಮಸಾಗರ ಇರಲಿದೆ. ಉಳಿದ 1ಬಸ್ ಹಿರೇಗುಂಟನೂರು ಗ್ರಾ.ಪಂ ಕಛೇರಿ ಆವರಣದಲ್ಲಿ ಇರಲಿದ್ದು, ಹೆಚ್ಚಿನದಾಗಿ ಸಾರ್ವಜನಿಕರು, ದಲಿತರ ಮುಖಂಡರು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಉಚಿತವಾಗಿ ಕಾರ್ಯಕ್ರಮಕ್ಕೆ ಆಗಮಿಸಿ ಯಶಸ್ವಿಗೊಳಿಸಲು ಕೋರಿದ್ದಾರೆ.

### ಪ್ರತಿ ಜಿಲ್ಲೆಯ ಒಂದು ವಸತಿ ಶಾಲೆಯಲ್ಲಿ ಸಿಬಿಎಸ್‌ಸಿ ಪಠ್ಯ ಅಳವಡಿಕೆಗೆ ಕ್ರಮ

» ಬೆಂಗಳೂರು

ರಾಜ್ಯದ ವಸತಿ ಶಾಲೆಗಳಲ್ಲಿ ಸಿಬಿಎಸ್ ಸಿ ಪಠ್ಯಕ್ರಮ ಅಳವಡಿಸಲಾಗುವುದು. ಈ ನಿಟ್ಟಿನಲ್ಲಿ ಈಗಾಗಲೇ ಸೂಕ್ತ ಕ್ರಮ ಕೈಗೊಳ್ಳಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್.ಸಿ.ಮಹದೇವಪ್ಪ ಹೇಳಿದರು. ವಿಧಾನ ಪರಿಷತ್ ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್ ನ ಅನಿಲ್ ಕುಮಾರ್ ಪ್ರಶ್ನೆಗೆ ಉತ್ತರಿಸಿದ ಅವರು, ವಸತಿ ಶಾಲೆಗಳಲ್ಲಿ ಸದ್ಯ ರಾಜ್ಯ ಪಠ್ಯಕ್ರಮ ಇದೆ. ಪ್ರತಿ ಜಿಲ್ಲೆಯ ಒಂದು ವಸತಿ ಶಾಲೆಯಲ್ಲಿ ಸಿಬಿಎಸ್ ಸಿ ಪಠ್ಯ ಅಳವಡಿಕೆಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು. ರಾಜ್ಯದಲ್ಲಿರುವ ವಸತಿ ಶಾಲೆಗಳ ಪೈಕಿ ಪ್ರಸ್ತುತ ಕೇವಲ 84 ಶಾಲೆಗಳ ಪಿಯುಸಿವರೆಗಿನ ತರಗತಿಗಳಿವೆ. ಎಲ್ಲ ವಸತಿ ಶಾಲೆಗಳಲ್ಲೂ ಪಿಯುಸಿ ತರಗತಿ ಪ್ರಾರಂಭಿಸಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ತಿಳಿಸಿದರು. ಆರ್ಥಿಕ ಇಲಾಖೆಯಿಂದ ಅನುಮತಿ ಸಿಕ್ಕಿದ ಬಳಿಕ ವಸತಿ ಶಾಲೆಗಳಲ್ಲಿ ಮೂಲ ಸೌಕರ್ಯಗಳ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

### ನಾಯಕನಹಟ್ಟಿ ಜಾತ್ರೆ: ಇಂದು ಸಿದ್ಧತಾ ಸಭೆ

» ಚಿತ್ರದುರ್ಗ

ಚಳ್ಳಕೆರೆ ತಾಲ್ಲೂಕು ನಾಯಕನಹಟ್ಟಿ ಗ್ರಾಮದ ಶ್ರೀ ಗುರುತಿಪ್ಪೇರುದ್ರ ಸ್ವಾಮಿಯ 2024ನೇ ಸಾಲಿನ ವಾರ್ಷಿಕ ಜಾತ್ರೆಯ ದೊಡ್ಡ ರಥೋತ್ಸವದ ಪೂರ್ವಭಾವಿ ಸಭೆಯು ಇದೇ ಫೆ.24ರಂದು ಸಂಜೆ 4ಕ್ಕೆ ನಾಯಕನಹಟ್ಟಿ ಒಳಮಠ ಸಮುದಾಯಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

## ಮಾರ್ಚ್ 03 ರಿಂದ 06 ರವರೆಗೆ ಪಲ್ಸ್ ಪೋಲಿಯೋ ಕಾರ್ಯಕ್ರಮ

# ಜಿಲ್ಲೆಯ 1.35 ಲಕ್ಷ ಮಕ್ಕಳಿಗೆ ಪೋಲಿಯೋ ಲಸಿಕೆ: ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ

» ಚಿತ್ರದುರ್ಗ

ರಾಷ್ಟ್ರೀಯ ಪಲ್ಸ್ ಕಾರ್ಯಕ್ರಮವು ಮಾರ್ಚ್ 03 ರಿಂದ 06 ರವರೆಗೆ ನಡೆಯಲಿದ್ದು, ಜಿಲ್ಲೆಯ ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೂ ಕಡ್ಡಾಯವಾಗಿ ಪೋಲಿಯೋ ಹನಿ ಹಾಕಿಸಿ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಜಿಲ್ಲಾ ಮಟ್ಟದ ಚಾಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೂ 2024ರ ಮಾರ್ಚ್ 3 ರಿಂದ 6 ರವರೆಗೆ ಪೋಲಿಯೋ ಲಸಿಕೆ ಹಾಕುವ ಕಾರ್ಯಕ್ರಮ ಏರ್ಪಡಿಸಿದ್ದು, ಜಿಲ್ಲೆಯ 1,35,105 ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದ್ದು, ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ವ್ಯವಸ್ಥಿತವಾಗಿ ಲಸಿಕಾ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ಪಲ್ಸ್ ಪೋಲಿಯೋ ಕಾರ್ಯಕ್ರಮದ ಕುರಿತು ಹೆಚ್ಚಿನ ಅರಿವು ಮೂಡಿಸುವ ನಿಟ್ಟಿನಲ್ಲಿ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ಶಾಲಾ ಮಕ್ಕಳಿಂದ ಪ್ರಭಾತಫೇರಿ ನಡೆಸಬೇಕು. ನಗರ ಪ್ರದೇಶಗಳಲ್ಲಿ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಡಿಯಲ್ಲಿಯೂ ಜಾಥಾ ಕಾರ್ಯಕ್ರಮ ಆಯೋಜಿಸಬೇಕು. ಪೋಲಿಯೋದಿಂದ ಉಂಟಾಗುವ ಗಂಭೀರ ಪರಿಣಾಮಗಳ ಕುರಿತು ಜಾಗೃತಿ ಮೂಡಿಸಬೇಕು. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಜತೆಗೆ ವಿವಿಧ ಇಲಾಖೆಗಳ ಸಮನ್ವಯತೆ, ಸಹಕಾರದೊಂದಿಗೆ ಪೋಲಿಯೋ ಲಸಿಕೆ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಅವರು ಪಲ್ಸ್ ಪೋಲಿಯೋ ಕಾರ್ಯಕ್ರಮದ ಕ್ರಿಯಾ ಯೋಜನೆ ಕುರಿತು ಮಾಹಿತಿ ನೀಡಿ, ಈ ಬಾರಿಯ ಪಲ್ಸ್ ಪೋಲಿಯೋ ಕಾರ್ಯಕ್ರಮವು ಮಾರ್ಚ್ 03 ರಿಂದ 06 ರವರೆಗೆ ನಡೆಯಲಿದ್ದು, 0–5 ವರ್ಷದೊಳಗಿನ ನಗರ ಪ್ರದೇಶದ 31829 ಮಕ್ಕಳು, ಗ್ರಾಮೀಣ ಪ್ರದೇಶದ 103276 ಮಕ್ಕಳು ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 1,35,105 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಲಸಿಕಾ ಕಾರ್ಯಕ್ರಮಕ್ಕಾಗಿ 1084 ಲಸಿಕಾ ಕೇಂದ್ರಗಳನ್ನು ಸ್ಥಾಪಿಸಿ, 2,291 ಲಸಿಕಾ ಕಾರ್ಯಕರ್ತರು, 259 ಮೇಲ್ವಿಚಾರಕರನ್ನು ನಿಯೋಜಿಸಲಾಗಿದೆ. ಮಾರ್ಚ್ 3 ರಂದು ಲಸಿಕಾ ಕೇಂದ್ರಗಳಲ್ಲಿಯೇ ಶೇ.95 ರಷ್ಟು ಪೋಲಿಯೋ ಲಸಿಕೆ ಹಾಕಲಾಗುವುದು. ನಂತರದ ದಿನಗಳಲ್ಲಿ ಮನೆ ಮನೆಗೆ ಭೇಟಿ ನೀಡುವುದರ ಮೂಲಕ ಲಸಿಕೆ ಹಾಕಲಾಗುವುದು ಎಂದರು.

ಬೇಸಿಗೆಯಲ್ಲಿ ಬಿಸಿಲು ಹೆಚ್ಚಳದಿಂದಾಗಿ ಲಸಿಕೆ ಹಾಳಾಗುವ ಸಾಧ್ಯತೆ ಇರುವುದರಿಂದ ತಾಲ್ಲೂಕು ಆರೋಗ್ಯಾಧಿಕಾರಿಗಳು ಹೆಚ್ಚು ಗಮನಹರಿಸಿ, ಮುಂಜಾಗ್ರತಾ ಕ್ರಮವಹಿಸಬೇಕು ಎಂದು ಸಲಹೆ ನೀಡಿದರು.

ವಿಶ್ವ ಆರೋಗ್ಯ ಸಂಸ್ಥೆಯ ಶ್ರೀಧರ್ ಮಾತನಾಡಿ, ನೆರೆಯ ರಾಷ್ಟ್ರಗಳಾದ ಪಾಕಿಸ್ತಾನ ಮತ್ತು ಅಫಘಾನಿಸ್ತಾನದಲ್ಲಿ ಕಳೆದ ವರ್ಷ 11 ಮಕ್ಕಳು ಪೋಲಿಯೋಗೆ ತುತ್ತಾಗಿದ್ದಾರೆ. ಹಾಗಾಗಿ ನಾವು ಪೋಲಿಯೋ ಕುರಿತು ಹೆಚ್ಚಿನ ಜಾಗೃತಿ ವಹಿಸಬೇಕಿದೆ. ನಮ್ಮ ರಾಜ್ಯದಲ್ಲಿ 2007 ರ ನಂತರ ಇಲ್ಲಿಯವರೆಗೂ ಯಾವುದೇ ಪೋಲಿಯೋ ಪ್ರಕರಣ ಕಂಡುಬಂದಿಲ್ಲ ಎಂದು ತಿಳಿಸಿದರು.

ಪಲ್ಸ್ ಪೋಲಿಯೋ ಕಾರ್ಯಕ್ರಮ ಕಳೆದ ಬಾರಿ ಜಿಲ್ಲೆಯಲ್ಲಿ ಶೇ.95 ರಷ್ಟು ಸಾಧನೆಯಾಗಿದೆ. ಈ ಬಾರಿ ವಿಶೇಷವಾಗಿ ಚಳ್ಳಕೆರೆ ಹಾಗೂ ಮೊಳಕಾಲ್ಮೂರು ತಾಲ್ಲೂಕುಗಳಿಗೆ ಹೆಚ್ಚಿನ ಗಮನಹರಿಸಿ, ಹೆಚ್ಚಿನ ಸಾಧನೆ ಮಾಡಲು ವಿವಿಧ ಇಲಾಖೆ ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕಿದೆ ಎಂದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ್ ಮಾತನಾಡಿ, ಈಗಾಗಲೇ ಪೋಲಿಯೋ ಮುಕ್ತ ಭಾರತ ಎಂದು ಘೋಷಣೆಯಾಗಿದ್ದು, ಒಂದು ಪೋಲಿಯೋ ಪ್ರಕರಣ ದಾಖಲಾದರೂ ರಾಷ್ಟ್ರಮಟ್ಟದಲ್ಲಿ ಮಾತ್ರವಲ್ಲದೇ ಅಂತರಾಷ್ಟ್ರೀಯ ಮಟ್ಟದಲ್ಲಿಯೂ ಸುದ್ದಿಯಾಗಲಿದೆ. ಈ ವಿಚಾರವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರ್ವಹಿಸಲು ವಿವಿಧ ಇಲಾಖೆಗಳ ಸಹಕಾರ ಅಗತ್ಯವಾಗಿದೆ ಎಂದರು.

ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ಬಹಳ ಮುಖ್ಯ ಪಾತ್ರವಹಿಲಿಸಲಿದ್ದಾರೆ. ಶಾಲಾ ಮಕ್ಕಳಿಂದ ಜಾಥಾ ಕಾರ್ಯಕ್ರಮ ನಡೆಸುವುದು, ಬೆಸ್ಕಾಂ ನವರು ಮಾರ್ಚ್ 01 ರಿಂದ 6 ರವರೆಗೆ ಯಾವುದೇ ಕಾರಣಕ್ಕೂ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಬೆಸ್ಕಾಂ ಅಧಿಕಾರಿಗಳು ಕ್ರಮವಹಿಸಬೇಕು. ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕಾಗಿ 173 ವಾಹನಗಳ ಅವಶ್ಯಕತೆ ಇದೆ. ವಾಹನಗಳ ವ್ಯವಸ್ಥೆ ಮಾಡುವಂತೆ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್ ಸೇರಿದಂತೆ ಆರೋಗ್ಯ ಇಲಾಖೆಯ ವಿವಿಧ ಅನುಷ್ಠಾಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಇದ್ದರು.

# ಶಾಕಿಂಗ್ ಭವಿಷ್ಯ; ರಾಷ್ಟ್ರೀಯ ನಾಯಕರು, ಸನ್ಯಾಸಿ ಸೇರಿ ಮೂವರ ಸಾವಾಗಲಿದೆ: ಕೋಡಿಮಠದ ಶ್ರೀ

» ಹುಬ್ಬಳ್ಳಿ

ದೇಶದ ಭವಿಷ್ಯ, ರಾಜಕಾರಣ ಸೇರಿದಂತೆ ಮುಂದಾಗಲಿರುವ ವಿಷಯಗಳ ಕುರಿತು ಭವಿಷ್ಯ ನುಡಿಯುವ ಕೋಡಿಮಠದ ಶ್ರೀ ಶಿವಯೋಗಿ ರಾಜೇಂದ್ರ ಸ್ವಾಮಿಜಿಯವರು ಶಾಕಿಂಗ್ ಭವಿಷ್ಯ ನುಡಿಸಿದ್ದಾರೆ. ಇದು ಇಡಿ ದೇಶವೇ ನಿಬ್ಬೆರಗಾಗುವಂತೆ ಮಾಡುವ ಭವಿಷ್ಯ ಎನ್ನಲಾಗಿದೆ.ವಾಣಿಜ್ಯ ನಗರಿ ಹುಬ್ಬಳ್ಳಿಯಲ್ಲಿ ಭವಿಷ್ಯ ನುಡಿದಿರುವ ಅವರು, ಇಬ್ಬರು ರಾಷ್ಟ್ರಮಟ್ಟದ ನಾಯಕರಿಗೆ ಸಾವಿನ ಕಂಟಕ ಇದ್ದು, ಓರ್ವ ಧಾರ್ಮಿಕ ಪ್ರಮುಖನಿಗೆ ಸಾವು ಉಂಟು ಇದೆ ದೇಶದಲ್ಲಿ ಮುಂದಿನ ದಿನಗಳಲ್ಲಿ ಸಂಭವಿಸುವ ಸಾವಿನ ಕುರಿತು ಅವರು ಭವಿಷ್ಯ



ನುಡಿದಿದ್ದಾರೆ.

ಇದು ರಾಜಕೀಯಕ್ಕೆ ಸಂಬಂಧಿಸಿದ್ದು ಎಂಬುದು ಮೇಲ್ನೋಟಕ್ಕೆ ಗೊತ್ತಾಗುತ್ತಿದೆ. ರಾಷ್ಟ್ರ ಮಟ್ಟದ ಇಬ್ಬರು ನಾಯಕರ ಜೀವಕ್ಕೆ ಗಂಡಾಂತರವಿದೆ. ಇವರೊಂದಿಗೆ ಧಾರ್ಮಿಕ ಮುಖ್ಯಸ್ತರು ಆಗಿರುವಂತ ಸನ್ಯಾಸಿಯೊಬ್ಬರ ಜೀವಕ್ಕೆ ಆಪತ್ತು ಎದುರಾಗಲಿದೆ. ಈ ಮೂವರಿಗೆ ಸಾವಿನ ಕಂಟಕ ಇದೆ. ವಿದೇಶಗಳಲ್ಲಿ ಆಗುವ ಕೆಲ ಬೆಳವಣಿಗೆಗಳಿಂದ ಭಾರತಕ್ಕೂ ಯುದ್ಧ ಭೀತಿ ಎದುರಾಗಲಿದೆ ಎಂದು ಹೇಳಿದರು.ಭವಿಷ್ಯ ರೈತರಿಗೂ ಕಹಿಕರ್ನಾಟಕಕ್ಕೆ ಸಂಬಂಧಿಸಿದಂತೆ ನಾಡಿನಲ್ಲಿ ಮುಂಬರುವ ದಿನಗಳಲ್ಲಿ ಅಕಾಲಿಕ ಮಳೆಯಿಂದ ಬೆಳೆ, ಪ್ರಾಣ ಹಾನಿ ಆಗುವ ಸಾಧ್ಯತೆ ಹೆಚ್ಚಾಗಿದೆ. ಬರಗಾಲದಿಂದ ತತ್ತರಿಸಿದ್ದ ಜನರು ಮುಂದಿನ ದಿನಗಳಲ್ಲಿ ಪ್ರವಾಸ ಎದುರಿಸಲಿದ್ದಾರೆ ಎಂದು ಅವರು ರೈತರಿಗೆ ಕಹಿ ಸುದ್ದಿ ನೀಡಿದ್ದಾರೆ. ಯುದ್ಧ ಭೀತಿ ಇದೆ.


ಪುಟ 2


#### ಅಮೃತ್ ಭಾರತ್ ರೈಲ್ವೆ ಯೋಜನೆ

## ಫೆ.26ರಂದು ರೈಲ್ವೆ ನಿಲ್ದಾಣ ನವೀಕರಣ ಕಾಮಗಾರಿಗೆ ಶಂಕು

**ಚಿತ್ರದುರ್ಗ:** ಅಮೃತ್ ಭಾರತ್ ರೈಲ್ವೆಸ್ಟೇಷನ್ ಯೋಜನೆಯಡಿ ಚಿತ್ರದುರ್ಗ ನಗರದ ರೈಲ್ವೆ ನಿಲ್ದಾಣ ನವೀಕರಣ ಹಾಗೂ ಮೇಲ್ದರ್ಜೆಗೇರಿಸುವ ಕಾಮಗಾರಿಗಳಿಗೆ ಶಂಕುಸ್ಥಾಪನೆ ಕಾರ್ಯಕ್ರಮ ಇದೇ ಫೆ.26ರಂದು ಬೆಳಿಗ್ಗೆ 10.45ಕ್ಕೆ ಚಿತ್ರದುರ್ಗ ನಗರದ ರೈಲ್ವೆ ನಿಲ್ದಾಣದಲ್ಲಿ ಹಮ್ಮಿಕೊಳ್ಳಲಾಗಿದೆ. ಮೈಸೂರು ವಿಭಾಗದಲ್ಲಿ 12 ಅಮೃತ್ ಭಾರತ್ ರೈಲ್ವೆ ಸ್ಟೇಷನ್, 13 ರೈಲ್ವೆ ಮೇಲ್ಸೇತುವೆ, ಕೆಳ ಸೇತುವೆ ಕಾಮಗಾರಿಗಳಿಗೆ ಪ್ರಧಾನ ಮಂತ್ರಿ ಮೋದಿ ಅವರು ಫೆ.26ರಂದು ಮಧ್ಯಾಹ್ನ 12.30ಕ್ಕೆ ವರ್ಚುವಲ್ ಮೂಲಕ ಶಂಕುಸ್ಥಾಪನೆ ನೆರವೇರಿಸುವರು. ಇದೇ ಸಂದರ್ಭದಲ್ಲಿ ಅಮೃತ್ ಭಾರತ್ ರೈಲ್ವೆ ಸ್ಟೇಷನ್ ಯೋಜನೆಯಡಿ ಚಿತ್ರದುರ್ಗರೈಲ್ವೆ ನಿಲ್ದಾಣ ನವೀಕರಣ ಹಾಗೂ ಮೇಲ್ದರ್ಜೆಗೇರಿಸುವ ಕಾಮಗಾರಿಗಳಿಗೆ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಸೇರಿದಂತೆ ವಿವಿಧ ಗಣ್ಯರು ನಗರದ ರೈಲ್ವೆ ನಿಲ್ದಾಣದಲ್ಲಿ ಉಪಸ್ಥಿತರಿದ್ದು ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

**ಪ್ರಮುಖ ಸುದ್ದಿ**

#### ವಿಧಾನಸೌಧ ಅಧಿವೇಶನದಲ್ಲಿ ಶಾಸಕ ಟಿ.ರಘುಮೂರ್ತಿ ಒತ್ತಾಯ

# ಕ್ಷೇತ್ರದ ಕುಂಠಿತಗೊಂಡ ಕಾಮಗಾರಿಗೆ ಹಣ ಬಿಡುಗಡೆಗೊಳಿಸಿ

» ಚಳ್ಳಕೆರೆ

ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ ಎರಡು ವರ್ಷಗಳಿಂದಗಿಂತ ಹೆಚ್ಚು ಕಾಲ ಹಲವಾರು ಕಾಮಗಾರಿಗಳು ಪೂರ್ಣ ಗೊಳ್ಳದೆ ಕಾಮಗಾರಿಗಳು ಸ್ಥಗಿತಗೊಂಡಿವೆ. ಸರ್ಕಾರ ಕೂಡಲೇ ಹಣ ಬಿಡುಗಡೆ ಮಾಡಿ ಕಾಮಗಾರಿ ಪೂರ್ಣಗೊಳಿಸಲು ಅವಕಾಶ ಮಾಡಿಕೊಡಬೇಕು. 2013–18ರ ಅವಧಿಯ ಕಾಮಗಾರಿಗಳಾಗಿದ್ದು, ಸರ್ಕಾರ ಈ ವಿಷಯವನ್ನು ಕ್ಷೇತ್ರದ ಹಿತದೃಷ್ಟಿಯಿಂದ ಗಂಭೀರವಾಗಿ ಪರಿಗಣಿಸಬೇಕೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆಗಳ ಮಂಡಳಿ ಅಧ್ಯಕ್ಷರಾದ ಟಿ.ರಘುಮೂರ್ತಿ ವಿಧಾನಸಭೆಯಲ್ಲಿ ತಿಳಿಸಿದ್ದಾರೆ.

ಶುಕ್ರವಾರ ಕಲಾಪದಲ್ಲಿ ಪಾಲ್ಗೊಂಡ ಅವರು, 2013–18ರ ಅವಧಿಯಲ್ಲಿ ಸರ್ಕಾರ ಹೆಚ್ಚು ಹಣ ನೀಡಿ ಹಲವಾರು ಕಾಮಗಾರಿಗಳನ್ನು ಪೂರ್ಣಗೊಳಿಸಲು ಅವಕಾಶ ಮಾಡಿಕೊಟ್ಟಿತ್ತು. 2018–19ರ ಜೆಡಿಎಸ್ ಕಾಂಗ್ರೆಸ್ ಮೈತ್ರಿ ಸರ್ಕಾರದಲ್ಲಿ ಕೇವಲ ಒಂದು ಕಾಮಗಾರಿ ಮಾತ್ರ ಮಂಜೂರಾಗಿತ್ತು. 2019–23ರಲ್ಲೂ ಸಹ ನಮ್ಮ ಕ್ಷೇತ್ರಕ್ಕೆ ನಿಗದಿತ ಪ್ರಮಾಣದಲ್ಲಿ ಅನುದಾನ ಸಿಗಲಿಲ್ಲ. ಇದು ಕ್ಷೇತ್ರದ ಅಭಿವೃದ್ಧಿ ಹಿನ್ನಡೆಗೆ ಪ್ರಮುಖ ಕಾರಣವಾಗಿದೆ. ಮೂರನೇ ಬಾರಿಗೆ ಕ್ಷೇತ್ರದ ಶಾಸಕನಾಗಿ ಜನತೆ ನನ್ನನ್ನು ಆಯ್ಕೆ ಮಾಡಿದ್ದು, ಸರ್ಕಾರ ಹಣ ಬಿಡುಗಡೆ ಮಾಡದೆ ಕಾಮಗಾರಿಗಳು ನಿಂತಿವೆ, ಇದರಿಂದ ಸಾರ್ವಜನಿಕರ ಎದುರಿನಲ್ಲಿ ಮುಜುಗರ ಅನುಭವಿಸುವ ಸ್ಥಿತಿ ಎದುರಾಗಿದೆ ಎಂದು ತಮ್ಮ ಅಳಲನ್ನು ತೋಡಿಕೊಂಡರು.



ಈ ಸಂದರ್ಭದಲ್ಲಿ ಅಂಕಿ ಅಂಶ ನೀಡಿದ ಅವರು, 2013–18ರ ಅವಧಿಯಲ್ಲಿ ಒಟ್ಟು 48 ಕಾಮಗಾರಿಗಳಿಗೆ 894 ಲಕ್ಷ ಹಣ ಬಿಡುಗಡೆಯಾಗಿತ್ತು, ಆ ಪೈಕಿ 625 ಲಕ್ಷ ಹಣ 25 ಕಾಮಗಾರಿಗಳಿಗೆ ವೆಚ್ಚ ಮಾಡಲಾಗಿದೆ. ಇನ್ನೂ ಬಾಕಿ ಉಳಿದ 23 ಕಾಮಗಾರಿಗಳಿಗೆ 269 ಲಕ್ಷ ಹಣ ಬೇಕಿದ್ದು ಸರ್ಕಾರ ಇದನ್ನು ಕೂಡಲೇ ಬಿಡುಗಡೆ ಮಾಡಬೇಕೆಂದರು. ಸರ್ಕಾರದ ನಿರ್ಲಕ್ಷ್ಯದಿಂದ ಕಳೆದ ಮೂರು ವರ್ಷಗಳ ಹಿಂದೆ ನಿರ್ಮಾಣವಾದ ಕಟ್ಟಡಗಳು ಶಿಥಿಲ ವ್ಯವಸ್ಥೆ ತಲುಪಿವೆ. ಜಗಜೀವನರಾಮ್ ಭವನ, ವಾಲ್ಮೀಕಿ ಭವನ, ಕನಕಭವನ, ಯಾದವ ಸಮುದಾಯ ಭವನ, ಭಂಜಾರಭವನ ಮುಂತಾದ ಕಟ್ಟಡಗಳು ಶಿಥಿಲ ವ್ಯವಸ್ಥೆ ತಲುಪಿವೆ. ಸಂಬಂಧಪಟ್ಟ ಅಧಿಕಾರಿಗಳು ಸಹ ಏನುಮಾಡದ ಸ್ಥಿತಿಯಲ್ಲಿದ್ದಾರೆ. ಹಣ ಬಿಡುಗಡೆಯಾಗದೇ ಹೊರತು ಈ ಕಾಮಗಾರಿಗಳು ಪೂರ್ಣಗೊಳ್ಳಲು ಸಾಧ್ಯವಿಲ್ಲ. ಈಗಾಗಲೇ ಬಾಕಿ ಉಳಿದ ಎಲ್ಲಾ 23 ಕಾಮಗಾರಿಗಳೂ ಹಣ ಬಿಡುಗಡೆಯಾದ ಎರಡ್ಮೂರು ತಿಂಗಳಲ್ಲೇ ಪೂರ್ಣಗೊಳ್ಳಲಿವೆ. ಇದರಿಂದ ಸಾರ್ವಜನಿಕರಿಗೂ ಸದುಪ 'ಯೋಗವಾಗುತ್ತದೆಯಲ್ಲದೆ, ಸರ್ಕಾರಕ್ಕೂ ಒಳ್ಳೆಯ ಹೆಸರು ಬರಲಿದೆ. ಸರ್ಕಾರ ಕೂಡಲೇ ಹಣ ಬಿಡುಗಡೆ ಮಾಡಿ ಜನರ ವಿಶ್ವಾಸಗಳಿಸಲು ನೆರವಾಗಬೇಕು ಎಂದು ಮನವಿ ಮಾಡಿದರು. ಶಾಸಕರ ಅನುದಾನ ಬೇಡಿಕೆ ಬಗ್ಗೆ ಸರ್ಕಾರದ ಪರವಾಗಿ ಉತ್ತರ ನೀಡಿದ ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ಶಾಸಕರ ಸಮಸ್ಯೆ ಅರ್ಥವಾಗುತ್ತದೆ. ಇದು ಕೇವಲ ಒಂದೇ ಕ್ಷೇತ್ರಕ್ಕೆ ಮಾತ್ರ ಸೀಮಿತವಾಗಿಲ್ಲ, ಸರ್ಕಾರ ಈಗಾಗಲೇ ಬಾಕಿ ಉಳಿದ ಬೇರೆ, ಬೇರೆ ಕ್ಷೇತ್ರದ ಕಾಮಗಾರಿಗಳೂ ಹಣ ಬಿಡುಗಡೆಗೊಳಿಸಬೇಕಿದೆ. ಈ ನಿಟ್ಟಿನಲ್ಲಿ ಮುಖ್ಯಮಂತ್ರಿ ಗಮನಕ್ಕೆ ತಂದು ಆರ್ಥಿಕ ಇಲಾಖೆಯೊಂದಿಗೆ ಚರ್ಚಿಸಿ ಹಣ ಬಿಡುಗಡೆಗೊಳಿಸುವ ಭರವಸೆ ನೀಡಿದರು.

## ಫಾಸ್ಟ್ ನ್ಯೂಸ್

### ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯತ್ವಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ 2024-25ನೇ ಸಾಲಿನ ಸದಸ್ಯತ್ವಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಇ.ಎಂ. ಮಂಜುನಾಥ ತಿಳಿಸಿದ್ದಾರೆ.ಸದಸ್ಯತ್ವದ ನವೀಕರಣ ಹಾಗೂ ಅರ್ಹ ಪತ್ರಕರ್ತರು ಹೊಸ ಸದಸ್ಯತ್ವಕ್ಕೆ ಅರ್ಜಿ ಸಲ್ಲಿಸಬಹುದು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪರ್ಯಾಯ ಸಂಘದಲ್ಲಿ ಸದಸ್ಯರಾದವರ ಅರ್ಜಿಯನ್ನು ತಿರಸ್ಕರಿಸಲಾಗುವುದು ಎಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎ. ಫಕೃದ್ದೀನ್ ಸ್ಪಷ್ಟಪಡಿಸಿದ್ದಾರೆ.

ಅರ್ಜಿ ಪಡೆಯಲು ಮತ್ತು ಭರ್ತಿ ಮಾಡಿದ ಅರ್ಜಿಯನ್ನು ದಾವಣಗೆರೆ ಮಹಾನಗರ ಪಾಲಿಕೆ ಆವರಣದಲ್ಲಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಕಛೇರಿ ಅಥವಾ ದಾವಣಗೆರೆ ಇಮೇಜ್ ಪತ್ರಿಕೆ ಕಾರ್ಯಾಲಯ, ಸಿಟಿ ಸೆಂಟ್ರಲ್ ಆಸ್ಪತ್ರೆ ಹಿಂಭಾಗ, ಪಿ.ಜೆ.ಬಡಾವಣೆ, ದಾವಣಗೆರೆ ಇಲ್ಲಿ ಬರುವ ಮಾರ್ಚ್ 5ರೊಳಗೆ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ ಸಂಘದ ಜಿಲ್ಲಾಧ್ಯಕ್ಷ ಇ.ಎಂ. ಮಂಜುನಾಥ (94482 77772), ಪ್ರಧಾನ ಕಾರ್ಯದರ್ಶಿ ಎ.ಫಕೃದ್ದೀನ್ ( 84949 49909), ಜಿಲ್ಲಾ ಖಜಾಂಚಿ ಎನ್.ವಿ.ಬದರಿನಾಥ್ (94487 28858) ಅವರನ್ನು ಸಂಪರ್ಕಿಸಬಹುದು.

### ಬಿಜೆಪಿ ಯುವ ಮೋರ್ಚಾ ರಾಜ್ಯ ಉಪಾಧ್ಯಕ್ಷರಾಗಿ ಜಿ.ಎಸ್. ಶ್ಯಾಮ್ ಆಯ್ಕೆ



» ದಾವಣಗೆರೆ

ಮಾಯಕೊಂಡ ವಿಧಾನಸಭಾ ಕ್ಷೇತ್ರದ ಬಿಜೆಪಿ ಯುವ ಮುಖಂಡ ಜಿ.ಎಸ್.ಶ್ಯಾಮ್ ಅವರನ್ನು ಭಾಜಪ ಯುವ ಮೋರ್ಚಾ ರಾಜ್ಯ ಉಪಾಧ್ಯಕ್ಷರನ್ನಾಗಿ ನೇಮಿಸಿ ರಾಜ್ಯ ಘಟಕ ಆದೇಶ ಹೊರಡಿಸಿದೆ. ಜಿ.ಎಸ್.ಶ್ಯಾಮ್ ಅವರ ಕಾರ್ಯವೈಖರಿ, ಪಕ್ಷ ಸಂಘಟನೆ ಗುರುತಿಸಿ ಜವಾಬ್ದಾರಿ ನೀಡಲಾಗಿದೆ. ಯುವ ಮೋರ್ಚಾ ರಾಜ್ಯಾಧ್ಯಕ್ಷ ಧೀರಜ್ ಮುನಿರಾಜು, ರಾಷ್ಟ್ರೀಯ ಯುವ ಮೋರ್ಚಾ ಅಧ್ಯಕ್ಷ ಹಾಗೂ ಸಂಸದ ತೇಜಸ್ವಿ ಸೂರ್ಯ, ಯುವ ಮೋರ್ಚ ರಾಜ್ಯ ಪ್ರಧಾನ ಕಾರ್ಯದರ್ಶಿ ಸಂದೀಪ್ ರವಿ ಅವರು ಜಿ.ಎಸ್. ಶ್ಯಾಮ್‌ರನ್ನು ರಾಜ್ಯ ಉಪಾಧ್ಯಕ್ಷರನ್ನಾಗಿ ನೇಮಿಸಿ ಆದೇಶ ಹೊರಡಿಸಿದ್ದಾರೆ. ಮುಂಬರುವ ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ನೀಡಿರುವ ಮಹತ್ವದ ಹೊಣೆಯನ್ನು ಅತ್ಯಂತ ಜವಾಬ್ದಾರಿಯಿಂದ ನಿರ್ವಹಿಸುವಂತೆ, ತಳಮಟ್ಟದಿಂದ ಪಕ್ಷ ಸಂಘಟಿಸುವಂತೆ ಹಾಗೂ ಮುಂಬರುವ ಎಲ್ಲ ಸವಾಲುಗಳನ್ನು ಸಮರ್ಥವಾಗಿ ಎದುರಿಸುವಂತೆ ಆದೇಶದಲ್ಲಿ ತಿಳಿಸಿದ್ದಾರೆ.

### ಶಾಕಿಂಗ್ ಭವಿಷ್ಯ; ರಾಷ್ಟ್ರೀಯ ನಾಯಕರು, ಸನ್ಯಾಸಿ ಸೇರಿ ಮೂವರ ಸಾವಾಗಲಿದೆ: ಕೋಡಿಮಠದ ಶ್ರೀ

» ಮೊದಲ ಪುಟದಿಂದ

ಅಣುಬಾಂಬು ಬೀಳುವ ಸಾಧ್ಯತೆ ಇದೆ. ಜಾಗತಿಕ ವರ್ಷ ತುಂಬಾ ಅಪಾಯಕಾರಿಯಾಗಿದೆ. ಗೌರಿ ಶಂಕರ ಶಿವಾ.. ಶಿವಾ.. ಎನ್ನುವ ರೀತಿ ಆಗಲಿದ್ದು, ಮನು ಕುಲ ಸಂಕಷ್ಟಕ್ಕೆ ಸಿಲುಕಲಿದೆ. ಮುಂಬರಲಿರುವ ದಿನಗಳು ಕಷ್ಟಕರವಾಗಿವೆ ಎಂದ ಅವರು ತಿಳಿಸಿದ್ದಾರೆ. ಈ ವರ್ಷ ಸಾಕಷ್ಟು ತೊಂದರೆ2024 ವರ್ಷ ಬಹಳ ತೊಂದರೆಯಿಂದ ಕೂಡಿದೆ ಕಾಲವಾಗಲಿದೆ. ಕಾಲಕ್ಕೆ ಮಳೆ ಬೆಳೆ ಬರಲ್ಲ. ಅಕಾಲಿಕ ಮಳೆ ಬೆಳೆ ಬರುತ್ತದೆ. ಇದರಿಂದ ಜನರಿಗೆ ತೊಂದರೆ ಆಗಲಿದೆ. ಇದರ ಜೊತೆಗೆ ಜಾಗತಿಕ ಮಟ್ಟದಲ್ಲಿ ಸಹ ದೊಡ್ಡ ಪ್ರಮಾಣದ ಅನಾಹುತ ಆಗುತ್ತವೆ. ವಿದೇಶಿದಲ್ಲಿ ಆಗುವ ಅನಾಹುತ ನಮ್ಮ ದೇಶದ ಮೇಲೆ ಪರಿಣಾಮ ಬೀರುತ್ತದೆ. ಯುದ್ಧ ವೈಷಮ್ಯ ಸಹ ನಮ್ಮಲ್ಲಿ ದುಷ್ಪರಿಣಾಮ ಬೀರಬಹುದು. ಅಲ್ಲಿ ಯುದ್ಧ ಜತೆ ಅಣುಬಾಂಬ್ ಸಹ ಬೀಳಬಹುದು. ರಾಜ್ಯ ರಾಷ್ಟ್ರ ರಾಜಕಾರಣದಲ್ಲಿ ಬದಲಾವಣೆ ಕುರಿತು ಪ್ರತಿಕ್ರಿಯಿಸಿದ ಅವರು, ಯುಗಾದಿ ಬಳಿಕ ರಾಜಕೀಯದಲ್ಲಿ ಹಲವು ಏರುಪೇರಾಗಲಿದೆ. ಆ ಬಗ್ಗೆ ಮಾತನಾಡಲು ಆಗಲ್ಲ. ಯುಗಾದಿ ಬಳಿಕ ನಾನು ಅಧ್ಯಯನ ಮಾಡಿ ತಿಳಿಸಬಹುದು ಎಂದರು.ಆಂತರಿಕ ಮಾಲಿನ್ಯ ಹೆಚ್ಚಾಗಲಿದೆನಾಡಿನಲ್ಲಿ ಒಳ್ಳೆಯ ಆಹಾರ ಗಾಳಿ, ವಾತಾವರಣ ಇಲ್ಲದಾಗಿದೆ. ಮನುಷ್ಯನ ಆರೋಗ್ಯ ಮತ್ತು ಆಯುಷ್ಯ ಕಡಿಮೆ ಆಗುತ್ತಿದೆ. ಇತ್ತ ಪರಿಸರ ಮಾಲಿನ್ಯ ಹೆಚ್ಚಾಗುತ್ತಿದೆ. ಇದೆಬಾಹ್ಯ, ಆಂತರಿಕ ಮಾಲಿನ್ಯ ಹೆಚ್ಚಾಗಲಿದ್ದು, ಬಾಹ್ಯ ಪರಿಸರಕ್ಕೆ ಶುದ್ಧ ಗಾಳಿ, ವಾತಾವರಣ ಬೇಕು ಗಿಡ ಮರ ಬೆಳೆಸಬೇಕು. ಆಂತರಿಕ ನೆಮ್ಮದಿ ಸಹ ಇಲ್ಲದಂತಾಗಿದೆ ಮನುಷ್ಯ ನಾನಾ ದುಶ್ಚಟಕ್ಕೆ ಒಳಗಾಗುತ್ತಿದ್ದಾನೆ ಎಂದು ಅವರು ಕಳವಳ ವ್ಯಕ್ತಪಡಿಸಿದರು

---

#### ಚುನಾವಣಾ ಅಧಿಕಾರಿ, ಎಂ.ಸಿ.ಸಿ ತಂಡ, ನೋಡಲ್ ಅಧಿಕಾರಿಗಳಿಗೆ ಚುನಾವಣಾ ತರಬೇತಿ

# ಲೋಕ ಚುನಾವಣೆಗೆ ಸನ್ನದ್ದರಾದ ಅಧಿಕಾರಿಗಳು

» ದಾವಣಗೆರೆ

ಮುಂಬರುವ 2024 ರ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಸನ್ನದ್ದರನ್ನಾಗಿಸಲು ಚುನಾವಣಾ ತಂಡಗಳಿಗೆ ಜಿಲ್ಲಾಡಳಿತದ ತುಂಗಭದ್ರಾ ಸಭಾಂಗಣದಲ್ಲಿ ತರಬೇತಿ ನೀಡಲಾಯಿತು.



ಸಹಾಯಕ ಚುನಾವಣಾಧಿಕಾರಿಗಳು, ಚೆಕ್‌ಪೋಸ್ಟ್‌ಗಳಲ್ಲಿ ಕಾರ್ಯನಿರ್ವಹಿಸುವ ಸ್ಟ್ಯಾಟಿಕ್ ಸರ್ವೆಲೆನ್ಸ್ ಟೀಮ್ ಎಸ್‌ಎಸ್‌ಟಿ, ಫ್ಲೈಯಿಂಗ್ ಸ್ಕ್ವಾಡ್, ವೀಡಿಯೋ ಸರ್ವಲೆನ್ಸ್ ಟೀಮ್, ವೀಡಿಯೋ ವೀವಿಂಗ್ ಟೀಮ್, ಅಬಕಾರಿ ತಂಡ, ವಾಣಿಜ್ಯ ತೆರಿಗೆ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು, ವಿವಿಧ ತಂಡಗಳ ನೋಡಲ್ ಅಧಿಕಾರಿಗಳಿಗೆ ಚುನಾವಣಾ ಕರ್ತವ್ಯಗಳ ಬಗ್ಗೆ ತರಬೇತಿ ನೀಡಲಾಯಿತು.

ಚನಾವಣಾ ಸಂದರ್ಭದಲ್ಲಿ ಚೆಕ್‌ಪೋಸ್ಟ್‌ಗಳಲ್ಲಿ ಅನುಸರಿಸಬೇಕಾದ ಕ್ರಮಗಳು, ಚುನಾವಣಾ ರ್‍ಯಾಲಿಗಳ ಸಂದರ್ಭದಲ್ಲಿ ಖರ್ಚುವೆಚ್ಚಗಳ ನಿಗಾ, ಅನುಮತಿ, ಪಡೆಯುವ ಬಗ್ಗೆ, ಚುನಾವಣಾ ಪ್ರಚಾರಕ್ಕೆ ಅನುಮತಿ ಇಲ್ಲದೆ ಕರಪತ್ರ ಹಂಚಿಕೆ, ಮಾದರಿ ನೀತಿ ಸಂಹಿತೆ ಉಲ್ಲಂಘನೆ, ಹಣ, ಮದ್ಯ ಹಂಚಿಕೆ, ಉಡುಗೊರೆಗಳ ಹಂಚಿಕೆ ಕುರಿತಂತೆ ನೀತಿ ಸಂಹಿತೆ ಉಲ್ಲಂಘನೆ ಕುರಿತಂತೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ, ಕಾಯಿದೆ, ಸೆಕ್ಷನ್‌ಗಳ ಬಗ್ಗೆ ಎಲ್ಲಾ ತಂಡಗಳಿಗೆ ತರಬೇತಿ ನೀಡಲಾಯಿತು.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಮಾತನಾಡಿ ಚುನಾವಣಾ ಆಯೋಗದ ನಿರ್ದೇಶನದಂತೆ ಚುನಾವಣೆಯನ್ನು ಪಾರದರ್ಶಕ, ನ್ಯಾಯ ಸಮ್ಮತ, ನಿಷ್ಪಕ್ಷಪಾತವಾಗಿ ನಡೆಸಲು ಎಲ್ಲಾ ಸಿಬ್ಬಂದಿಗಳು ಭಾಗವಹಿಸುವಿಕೆಯೊಂದಿಗೆ ಚುನಾವಣಾ ಕರ್ತವ್ಯ ನಿರ್ವಹಿಸಬೇಕು. ಚುನಾವಣಾ ಸಂದರ್ಭದಲ್ಲಿ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲನೆ, ಅನುಷ್ಠಾನ ಮಾಡುವ ಮೂಲಕ ಪಾರದರ್ಶಕ ಚುನಾವಣೆ ನಡೆಸಲು ಸಂಘಟಿತರಾಗಿ ಕೆಲಸ ಮಾಡಬೇಕೆಂದರು.

ಚುನಾವಣಾ ಕರ್ತವ್ಯವನ್ನು ಬಹಳ ಜವಾಬ್ದಾರಿಯುತವಾಗಿ ನಿರ್ವಹಿಸಬೇಕು, ಯಾವುದೇ ನಿರ್ಲಕ್ಷ್ಯತೆ ಸಲ್ಲದು, ಚುನಾವಣಾ ಸಂದರ್ಭದಲ್ಲಿ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳನ್ನು ಸರಿಯಾಗಿ ದಾಖಲು ಮಾಡುವ ಮೂಲಕ ಅದಕ್ಕೆ ಪೂರಕವಾದ ಸಾಕ್ಷ್ಯಗಳ ಕ್ರೂಢೀಕರಣ ಮಾಡಿಕೊಳ್ಳಬೇಕೆಂದರು.

ತರಬೇತಿಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಮಾದರಿ ನೀತಿ ಸಂಹಿತೆ ನೋಡಲ್ ಅಧಿಕಾರಿ ಸುರೇಶ್ ಇಟ್ನಾಳ್, ಅಪರ ಜಿಲ್ಲಾಧಿಕಾರಿ ಸೈಯ್ಯದಾ ಅಫ್ರೀನ್ ಭಾನು ಎಸ್.ಬಳ್ಳಾರಿ, ತರಬೇತುದಾರರಾದ ಅರವಿಂದ್ ಐರಾಣಿ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

---

# 24ರಂದು ಚಳ್ಳಕೆರೆಯಲ್ಲಿ ಬಿಜೆಪಿ ಎಸ್ಸಿ ಸಮಾವೇಶ

» ಚಿತ್ರದುರ್ಗ

ಚಳ್ಳಕೆರೆಯ ವಾಲ್ಮೀಕಿ ಸಮುದಾಯ ಭವನದಲ್ಲಿ ಫೆ. 24ರ ಶನಿವಾರದಂದು ಪರಿಶಿಷ್ಟ ಪಂಗಡದ ಮುನ್ನಡೆಯ ಜಿಲ್ಲಾ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ ಎಂದು ಭಾರತೀಯ ಜನತಾ ಪಾರ್ಟಿಯ ಜಿಲ್ಲಾಧ್ಯಕ್ಷರಾದ ಎ.ಮುರಳಿ ತಿಳಿಸಿದರು.




ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಚಿತ್ರದುರ್ಗ ಜಿಲ್ಲೆಯಲ್ಲಿ ನಾಯಕರ ಜನಸಂಖ್ಯೆ ಹೆಚ್ಚಾಗಿದೆ ಅಲ್ಲದೆ ಬಿಜೆಪಿ ಸರ್ಕಾರ ಇದ್ದಾಗ ಈ ಜನಾಂಗಕ್ಕೆ ನೀಡಿರುವ ವಿವಿಧ ರೀತಿಯ ಸೌಲಭ್ಯಗಳು ಹಾಗೂ ಕೇಂದ್ರ ಸರ್ಕಾರ ನೀಡಿದ ಸೌಲಭ್ಯಗಳನ್ನು ತಿಳಿಸುವ ಸಲುವಾಗಿ ಈ ಮುನ್ನಡೆ ಸಮಾವೇಶವನ್ನು ನಡೆಸುತ್ತಿರುವುದಾಗಿ ತಿಳಿಸಿದ ಅವರು ಪರಿಶಿಷ್ಟ ಪಂಗಡದಲ್ಲಿ ಜಾಗೃತಿಯನ್ನು ಮೂಡಿಸುವ ಕಾರ್ಯಕ್ರಮ ಇದಾಗಿದೆ ಎಂದರು. ಈ ಸಮಾವೇಶಕ್ಕೆ ಕೇಂದ್ರ ಸಚಿವರಾದ ಎ.ನಾರಾಯಣಸ್ವಾಮಿ, ಮಾಜಿ ಮುಖ್ಯಮಂತ್ರಿಗಳಾದ ಬಸವರಾಜು ಬೊಮ್ಮಾಯಿ, ಮಾಜಿ ಸಚಿವರಾದ ಶ್ರೀರಾಮುಲು, ರಾಜುಗೌಡ, ಎಸ್.ಟಿ.ಘಟಕದ ರಾಜ್ಯಾಧ್ಯಕ್ಷ ಹನುಮಂತ,ವಿಧಾನಪರಿಷತ್ ಸದಸ್ಯರಾದ ಕೆ.ಎಸ.ನವೀನ್, ವೈ.ಎ ನಾರಾಯಣಸ್ವಾಮಿ, ಚಿದಾನಂದಗೌಡ, ಶಾಸಕರಾದ ಎಂ.ಚಂದ್ರಪ್ಪ, ಮಾಜಿ ಶಾಸಕರಾದ ತಿಪ್ಪಾರೆಡ್ಡಿ, ನೇರ್ಲಗುಂಟೆ ತಿಪ್ಪೇಸ್ವಾಮಿ, ಲಿಂಗಮೂರ್ತಿ ಸೇರಿದಂತೆ ಇತರರು ಭಾಗವಹಿಸಲಿದ್ದಾರೆ. ಇದು ಜಿಲ್ಲಾ ಮಟ್ಟದ ಸಮಾವೇಶ ಆಗಿರುವುದರಿಂದ ಪಂಚಾಯಿತಿಗೆ 25 ರಂತೆ ಪ್ರತಿ ತಾಲ್ಲೂಕಿನಿಂದ 200 ರಿಂದ 250 ಜನ ಆಯ್ದ ನಾಯಕರು ಮಾತ್ರ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ ಎಂದು ಮುರಳಿ ತಿಳಿಸಿದರು.

ಮಾಜಿ ಶಾಸಕರಾದ ನೇರ್ಲಗಂಟೆ ತಿಪ್ಪೇಸ್ವಾಮಿ ಮಾತನಾಡಿ, ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಬಿಜೆಪಿ ಸರ್ಕಾರ ಏನು ಮಾಡಿದೆ ಎಂಬುದನ್ನು ತಿಳಿಸುವ ಕಾರ್ಯ ಇದಾಗಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡ ಬೇಡ ಎಂದು ನೆಹರುರವರು ಬಡೆದಿರುವ ಪತ್ರವನ್ನು ನಮ್ಮ ಪ್ರಧಾನ ಮಂತ್ರಿಗಳು ಸದನದಲ್ಲಿ ತೋರಿಸಿದ್ದಾರೆ ಇವರಿಗೆ ಯಾರು ಅನ್ಯಾಯ ಮಾಡುತ್ತಿದ್ದಾರೆ ಎಂಬುದನ್ನು ಈ ಜನಾಂಗ ತಿಳಿಯಬೇಕಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಷ್ಟ್ರಪತಿಯವರನ್ನು ಏಕವಚನದಲ್ಲಿ ಮಾತನಾಡಿದ್ದಾರೆ. ಇದು ಅವರ ನಾಗರಿಕತೆಯನ್ನು ತಿಳಿಸುತ್ತದೆ. ಈ ಜನಾಂಗವನ್ನು ಬರೀ ಚುನಾವಣೆಯಲ್ಲಿ ಮಾತ್ರ ಬಳಕೆ ಮಾಡಲಾಗುತ್ತದೆ ನಂತರ ಅವರನ್ನು ಬಿಡಲಾಗುತ್ತದೆ. ನಮ್ಮ ಸರ್ಕಾರ ಇವರಿಗಾಗಿ ಮಾಡಿದ ಕೆಲಸಗಳನ್ನು ತಿಳಿಸುವ ಕಾರ್ಯ ಇದಾಗಿದೆ. ಕಾಂಗ್ರೆಸ್ ನವರು ರಾಮ ಕಾಲ್ಪನಿಕ ಎಂದು ಹೇಳಿದ್ದಾರೆ ಆದರೆ ಅಧರ್ಮ ಯಾವಾಗ ಬರುತ್ತದೆ ಆಗ ನಾನು ಹುಟ್ಟಿ ಬಂದು ಅದನ್ನು ನಾಶ ಮಾಡುತ್ತೇನೆ ಎಂದು ಭಗವಂತ ತಿಳಿಸಿದ್ದಾನೆ ಅಯೋಧ್ಯೆಯಲ್ಲಿ ರಾಮ ಮಂದಿರವನ್ನು ನಿರ್ಮಾಣ ಮಾಡುವುದರ ಮೂಲಕ ಜನತೆಯ ಭಕ್ತಿಯನ್ನು ಹೆಚ್ಚಿಸಿದ್ದಾರೆ. ರಾಷ್ಟ್ರಪತಿಗಳಾಗಿ ದ್ರೌಪತಿ ಮುರ್ಮ ಹಾಗೂ ಆಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ ಮಾಡಿದ ಬಗ್ಗೆ ಕೇಂದ್ರ ಸರ್ಕಾರಕ್ಕೆ ಅಭಿನಂದನೆಯನ್ನು ತಿಳಿಸುವ ಕಾರ್ಯವನ್ನು ಇದರಲ್ಲಿ ಮಾಡಲಾಗುವುದು ಎಂದರು.

ಗೋಷ್ಟಿಯಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಾಪುರ ಸುರೇಶ್, ಜಿಲ್ಲಾಧ್ಯಕ್ಷ ಶಿವಣ್ಣ, ಪರಿಶಿಷ್ಟ ಘಟಕದ ಉಪಾಧ್ಯಕ್ಷ ಅನಿತ್, ಪ್ರಧಾನ ಕಾರ್ಯದರ್ಶಿ ರಾಮದಾಸ್, ಈಶ್ವರ ಮಂಜುನಾಥ್, ತಿಪ್ಪೇಸ್ವಾಮಿ, ಸರಸ್ವತಿ ಕವನ ಕಾಂಚನ ಸೇರಿದಂತೆ ಇತರರು ಭಾಗವಹಿಸಿದ್ದರು.

---

### ರಾಜ್ಯಾದ್ಯಂತ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸಾ ದರಪಟ್ಟಿ ಪ್ರಕಟಿಸುವುದು ಕಡ್ಡಾಯ: ರಾಜ್ಯ ಸರ್ಕಾರ ಆದೇಶ

» ಬೆಂಗಳೂರು

ರಾಜ್ಯದಲ್ಲಿನ ಖಾಸಗಿ ಆಸ್ಪತ್ರೆಗಳು ರೋಗಿಗಳ ಸುಲಿಗೆಗೆ ಇಳಿದಿವೆ. ತಮಗೆ ಇಷ್ಟ ಬಂದಂತೆ ಚಿಕಿತ್ಸಾ ದರವನ್ನು ವಿಧಿಸುತ್ತಿವೆ ಎಂಬುದಾಗಿ ಸಾರ್ವಜನಿಕರಿಂದ ಸರ್ಕಾರಕ್ಕೆ ದೂರುಗಳು ಸಲ್ಲಿಕೆಯಾಗಿದ್ದವು. ಈ ದೂರುಗಳ ಬೆನ್ನಲ್ಲೇ ಇನ್ಮುಂದೆ ರಾಜ್ಯಾದ್ಯಂತ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸಾ ದರಪಟ್ಟಿ ಬೋರ್ಡ್ ಅಳವಡಿಸೋದನ್ನು ಕಡ್ಡಾಯಗೊಳಿಸಿ ಸರ್ಕಾರ ಆದೇಶ ಮಾಡಿದೆ.

ರಾಜ್ಯದಲ್ಲಿ ಖಾಸಗೀ ಆಸ್ಪತ್ರೆಗಳಲ್ಲಿ ಅವರದ್ದೇ ದರ್ಬಾರ್. ತಮಗೆ ಇಷ್ಟಬಂದಂತೆ ರೋಗಿಗಳಿಗೆ ಚಿಕಿತ್ಸೆಯ ದರವನ್ನು ವಿಧಿಸಲಾಗುತ್ತಿವೆ. ಈ ದರಪಟ್ಟಿಯಿಂದಾಗಿ ರಾಜ್ಯದಲ್ಲಿನ ಜನರು ಸುಲಿಗೆಗೆಒಳಗಾಗಿದ್ದು,ಬಡವರು,ಮಧ್ಯಮ ವರ್ಗದವರಿಗೆ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಎಂಬುದೇ ಸಿಂಹಸ್ವಪ್ನವಾದಂತೆ ಆಗಿದೆ ಎನ್ನಲಾಗುತ್ತಿದೆ.

ಈ ಹಿನ್ನಲೆಯಲ್ಲಿ ಸರ್ಕಾರಕ್ಕೆ, ಆರೋಗ್ಯ ಇಲಾಖೆಗೆ ಸಾರ್ವಜನಿಕರು ವಿವಿಧ ಖಾಸಗಿ ಆಸ್ಪತ್ರೆಗಳ ವಿರುದ್ಧ ದೂರು ಸಲ್ಲಿಸಲಾಗಿತ್ತು. ಈ ದೂರಿನ ಬೆನ್ನಲ್ಲೇ ಎಚ್ಚೆತ್ತುಕೊಂಡಿರುವಂತ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು, ಖಾಸಗಿ ಆಸ್ಪತ್ರೆಗಳಲ್ಲಿ ಇನ್ಮುಂದೆ ಚಿಕಿತ್ಸಾ ದರಪಟ್ಟಿ ಬೋರ್ಡ್ ಹಾಕುವುದನ್ನು ಕಡ್ಡಾಯಗೊಳಿಸುವಂತೆ ಆದೇಶ ಹೊರಡಿಸಲು ಆರೋಗ್ಯ ಇಲಾಖೆಗೆ ಸೂಚಿಸಿದ್ದರು.

ಆರೋಗ್ಯ ಸಚಿವರ ಸೂಚನೆಯಂತೆ ಆರೋಗ್ಯ ಇಲಾಖೆಯಿಂದ ಖಾಸಗಿ ಆಸ್ಪತ್ರೆಗಳಲ್ಲಿ ಕಡ್ಡಾಯವಾಗಿ ಚಿಕಿತ್ಸಾ ದರಪಟ್ಟಿಯ ಬೋರ್ಡ್ ಅಳವಡಿಸುವಂತೆ ಖಡಕ್ ಸೂಚನೆಯನ್ನು ಹೊರಡಿಸಿದೆ. ಒಂದು ವೇಳೆ ಈ ನಿಯಮವನ್ನು ಪಾಲಿಸದೇ ಇದ್ದರೇ, ಅಂತಹ ಆಸ್ಪತ್ರೆಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳೋದಾಗಿ ಎಚ್ಚರಿಕೆ ನೀಡಿದೆ.

---

# ವಿದ್ಯಾರ್ಥಿಗಳಿಗೆ ಬಿಸಿಯೂಟದ ನಂತರ ರಾಗಿಮಾಲ್ಟ್ ವಿತರಣೆ

» ಚಳ್ಳಕೆರೆ

ಸರ್ಕಾರಿ ಶಾಲೆಗಳಲ್ಲಿ ಅಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ ಪೌಷ್ಠಿಕಾಂಶದ ಆಹಾರ ರೂಪದಲ್ಲಿ ರಾಗಿಮಾಲ್ಟ್ ನೀಡಲು ಸರ್ಕಾರ ನಿರ್ಧರಿಸಿ, ಆದೇಶಿಸಿದ್ದು, ಗುರುವಾರ ನಗರದ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲೆಯ ವಿದ್ಯಾರ್ಥಿಗಳಿಗೆ ರಾಗಿಮಾಲ್ಟ್ ವಿತರಣೆ ಮಾಡುವ ಮೂಲಕ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಚಾಲನೆ ನೀಡಿದರು.



ಪ್ರತಿನಿತ್ಯ ವಿದ್ಯಾರ್ಥಿಗಳು ಮಧ್ಯಾಹ್ನ ಬಿಸಿಯೂಟದ ನಂತರ ರಾಗಿಮಾಲ್ಟ್‌ನ್ನು ನೀಡುವಂತೆ ಸೂಚನೆ ನೀಡಿದ ಹಿನ್ನೆಲೆಯಲ್ಲಿ ಎಲ್ಲಾ ಮಕ್ಕಳಿಗೂ ರಾಗಿಮಾಲ್ಟ್ ವಿತರಣೆ ಮಾಡಲಾಗುತ್ತಿದೆ. ಇದರಿಂದ ಆರೋಗ್ಯದಲ್ಲಿ ಸುಧಾರಣೆಯೊಂದಿಗೆ ಬುದ್ದಿಕೌಶಲ್ಯವೂ ಹೆಚ್ಚಾಗಲಿದೆ. ಪೌಷ್ಠಿಕಾಂಶ ಆಹಾರ ಸೇವನೆಯಿಂದ ಸದೃಢ ಆರೋಗ್ಯ ಪಡೆಯಲು ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಅಕ್ಷರ ದಾಸೋಹ ಅಧಿಕಾರಿ ತಿಪ್ಪೇಸ್ವಾಮಿ, ಬಿಆರ್‌ಸಿ ತಿಪ್ಪೇಸ್ವಾಮಿ, ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಆರ್.ಮಾರುತೇಶ್, ಪ್ರೌಢಶಾಲೆ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ರಾಜಕುಮಾರ್, ಬಿ.ಫರೀದ್‌ಖಾನ್, ಪಾಲಯ್ಯ ಶಾಲೆಯ ಮುಖ್ಯ ಶಿಕ್ಷಕ ಹಾಗೂ ಶಿಕ್ಷಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

---

## ಪ್ರಮುಖ ಸುದ್ದಿ

#### ಗ್ರಾಮ ಆರೋಗ್ಯ ಸಮಿತಿ ಸದಸ್ಯರಿಗೆ ತರಬೇತಿ - ಸಿ.ಜಿ.ಹಳ್ಳಿ ವೈದ್ಯಾಧಿಕಾರಿ ಡಾ.ಮಂಜುನಾಥ

# ಆರೋಗ್ಯ ಕಾರ್ಯಕ್ರಮ ಯಶಸ್ವಿಗೆ ಸಮುದಾಯ ಸಹಭಾಗಿತ್ವ ಅಗತ್ಯ

» ಚಿತ್ರದುರ್ಗ

ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮ ಯಶಸ್ವಿ ಅನುಷ್ಠಾನಕ್ಕೆ ಸಮುದಾಯದ ಸಹಭಾಗಿತ್ವ ಅಗತ್ಯವಾಗಿದೆ ಎಂದು ಚಿಕ್ಕಗೊಂಡನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಮಂಜುನಾಥ ಹೇಳಿದರು.

ತಾಲ್ಲೂಕಿನ ಜಿ.ಆರ್.ಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ಶುಕ್ರವಾರ ಗ್ರಾಮ ಆರೋಗ್ಯ ಸಮಿತಿ ಸದಸ್ಯರಿಗೆ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಆರೋಗ್ಯ ಕಾರ್ಯಕ್ರಮಗಳು ಹಾಗೂ ಸರ್ಕಾರದ ಉಪಕ್ರಮಗಳ ಬಗ್ಗೆ ಮಾಹಿತಿ ಸಮುದಾಯಕ್ಕೆ ನೀಡುವುದು, ಕಾರ್ಯಕ್ರಮಗಳ ಯೋಜನೆ ಮತ್ತು ಅನುಷ್ಠಾನದಲ್ಲಿ ಭಾಗವಹಿಸುವುದು ಹಾಗೂ ಗ್ರಾಮದಲ್ಲಿ ಉತ್ತಮ ಆರೋಗ್ಯ ಸ್ಥಿತಿ ಸಾಧಿಸಲು ಸಾಮೂಹಿಕ ಕ್ರಮಕೈಗೊಳ್ಳಲು ಸಮುದಾಯವನ್ನು ಸಶಕ್ತಗೊಳಿಸುವುದು ಬಹಳ ಮುಖ್ಯವಾಗಿದೆ ಎಂದರು.



ಪ್ರಾಥಮಿಕ ಆರೋಗ್ಯ ಕೇಂದ್ರ ಜಿ.ಆರ್. ಹಳ್ಳಿ ವೈದ್ಯಾಧಿಕಾರಿ ಡಾ.ಗೀತಾಂಜಲಿ ಮಾತನಾಡಿ, ಅಪೌಷ್ಟಿಕತೆ ಅನಾರೋಗ್ಯಕ್ಕೆ ಮುಖ್ಯ ಕಾರಣವಾಗಿದೆ. ಅಪೌಷ್ಟಿಕತೆಗೆ ಒಳಗಾದ ಜನರು ರೋಗಗಳಿಂದ ತಾವು ಮುಕ್ತವಾಗುವ ಸಾಮರ್ಥ್ಯವನ್ನು ಕಳೆದುಕೊಂಡಿರುವ ಕಾರಣದಿಂದ ಸುಲಭವಾಗಿ ಅನಾರೋಗ್ಯಕ್ಕೆ ತುತ್ತಾಗುತ್ತಾರೆ, ಅತಿಸಾರ, ದಡಾರ, ಮಲೇರಿಯಾ ಮತ್ತು ನ್ಯೂಮೋನಿಯದಂತಹ ರೋಗಗಳೂ ಸಹ ಬಹಳಷ್ಟು ಸಲ ಅಪೌಷ್ಟಿಕತೆಗೆ ಒಳಗಾದ ಜನರ ಸಾವಿಗೆ ಕಾರಣವಾಗುತ್ತವೆ. ಹಾಗಾಗಿ ಗ್ರಾಮ ಆರೋಗ್ಯ ನೈರ್ಮಲ್ಯ ಸಮಿತಿ ಸದಸ್ಯರು ಜನ ಜಾಗೃತಿ ಮೂಡಿಸಲು ಆಂದೋಲನದ ಮೂಲಕ ಗ್ರಾಮಗಳಲ್ಲಿ ಅರಿವು ಮೂಡಿಸಬೇಕು ಎಂದರು.

ಜಿಲ್ಲಾ ಸಂಯೋಜಕ ಕರಕಪ್ಪ ಮೇಟಿ ಗ್ರಾ ಆರೋಗ್ಯ ಸಮಿತಿ ಜವಾಬ್ದಾರಿ ಸಮಿತಿ ರಚನೆ ಸದಸ್ಯರ ಜವಾಬ್ದಾರಿ ಮುಕ್ತ ನಿಧಿ ಬಳಕೆ ಬಗ್ಗೆ ತಿಳಿಸಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮುಗಪ್ಪ ನೀರು ನೈರ್ಮಲ್ಯ ಸ್ವಚ್ಛತೆ ಬಗ್ಗೆ ವಹಿಸಬೇಕಾದ ಕ್ರಮಗಳ ಬಗ್ಗೆ ತಿಳಿಸಿದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್. ಎಸ್.ಮಂಜುನಾಥ್ ಮಾಹಿತಿ ಶಿಕ್ಷಣ ನೀಡಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಪ್ರಶಾಂತ್, ಪವನ್ ಕುಮಾರ್, ಪ್ರವೀಣ್, ಶಂಕರ್ ನಾಯ್ಕ್, ಆರೋಗ್ಯ ಸುರಕ್ಷತಾಧಿಕಾರಿಗಳಾದ ನಾಗರತ್ನಮ್ಮ, ಸುಧಾ, ಶಿಲ್ಪ, ಮಂಜುಳ, ಗಾಯತ್ರಿ, ಮಂಜುಳಾ, ಸಮುದಾಯ ಆರೋಗ್ಯಾಧಿಕಾರಿಗಳಾದ ಶಭಾನಾ, ಲೋಹಿತ್ ಕುಮಾರ್, ರಮೇಶ್, ವಿಹೆಚ್‌ಎಸ್‌ಎನ್‌ಸಿ ಅಧ್ಯಕ್ಷರಾದ ತಿಮ್ಮರಾಜು, ರೇಷ್ಮಾಬಾನು, ಹೊನ್ನೂರಪ್ಪ, ಶಿವಮ್ಮ, ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

# ಸಾಮಾಜಿಕ ಮಾಧ್ಯಮ ಸುದ್ದಿಯ ಮೇಲೆ ನಿಗಾ ಇರಿಸಿ

» ಚಿತ್ರದುರ್ಗ

ಮುಂಬರುವ ಸಾರ್ವತ್ರಿಕ ಲೋಕಸಭಾ ಚುನಾವಣೆ ವೇಳೆ ಜಿಲ್ಲಾ ಎಂ.ಸಿ.ಎಂ.ಸಿ (ಮಾಧ್ಯಮ ಪ್ರಮಾಣೀಕರಣ ಹಾಗೂ ನಿಗಾ ಸಮಿತಿ) ಸಾಮಾಜಿಕ ಮಾಧ್ಯಮ, ಸುಳ್ಳು ಸುದ್ದಿಗಳು ಹಾಗೂ ಕಾಸಿಗಾಗಿ ಸುದ್ದಿಯ ಮೇಲೆ ಹೆಚ್ಚಿನ ನಿಗಾ ಇರಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಜಿಲ್ಲಾ ಮಟ್ಟದ ಎಂ.ಸಿ.ಎಂ.ಸಿ ಸಮಿತಿಯ ಅಧಿಕಾರಿಗಳಿಗಾಗಿ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ವತಿಯಿಂದ ವಿಡಿಯೋ ಕಾನ್ಫರೆನ್ಸ್ ಮೂಲಕ ಆಯೋಜಿಸಲಾದ ತರಬೇತಿ ನಂತರ ನಗರದ ಜಿಲ್ಲಾಧಿಕಾರಿ ಕಚೇರಿಯ ಕೆ-ಸ್ವಾನ್ ವಿಡಿಯೋ ಕಾನ್ಫರೆನ್ಸ್ ಹಾಲ್‌ನಲ್ಲಿ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದರು.

ಜಿಲ್ಲಾ ಚುನಾವಣಾಧಿಕಾರಿಗಳ ನೇತೃತ್ವದಲ್ಲಿ ಎಂ.ಸಿ.ಎಂ.ಸಿ ಸಮಿತಿ ಕಾರ್ಯನಿರ್ವಹಿಸುತ್ತದೆ. ಚುನಾವಣೆ ಸಂಬಂಧವಾಗಿ ಎಲೆಕ್ಟ್ರಾನಿಕ್ ಮಾಧ್ಯಮಗಳಲ್ಲಿ ಬಿತ್ತರಿಸುವ ಜಾಹೀರಾತುಗಳ ಪ್ರಮಾಣೀಕರಣದ ಜೊತೆಗೆ, ಪೇಯ್ಡ್ ನ್ಯೂಸ್‌ಗಳನ್ನು ಗುರುತಿಸಿ ಅಭ್ಯರ್ಥಿ ಹಾಗೂ ರಾಜಕೀಯ ಪಕ್ಷದ ಚುನಾವಣಾ ವೆಚ್ಚಗಳಿಗೆ ಇದನ್ನು ಸೇರಿಸುವ ಕೆಲಸವನ್ನು ಎಂ.ಸಿ.ಎಂ.ಸಿ ಮಾಡಬೇಕು. ಇಂದಿನ ಸಮಯದಲ್ಲಿ ಸಾಮಾಜಿಕ ಮಾಧ್ಯಮಗಳು ಚುನಾವಣೆಯ ಪ್ರಚಾರದಲ್ಲಿ ಹೆಚ್ಚಿನ ಪ್ರಭಾವ ಬೀರುತ್ತವೆ. ಹಾಗಾಗಿ ಮುದ್ರಣ, ಎಲೆಕ್ಟ್ರಾನಿಕ್ ಸೇರಿದಂತೆ ಸಾಮಾಜಿಕ ಮಾಧ್ಯಮಗಳ ಮೇಲೆ ನಿಗಾ ಇಡಲು ಪ್ರತ್ಯೇಕ ಸಮಿತಿಯನ್ನು ಎಂ.ಸಿ.ಎಂ.ಸಿ ಅಡಿ ರಚನೆ ಮಾಡಲಾಗುವುದು ಎಂದರು.

ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಭಾವಿಗಳಾಗಿರುವವರು, ಸಾಮಾಜಿಕ ಮಾಧ್ಯಮಗಳನ್ನು ಬಳಸಿ ರಾಜಕೀಯ ಪಕ್ಷ ಹಾಗೂ ಅಭ್ಯರ್ಥಿಗಳಿಗೆ ಅನುಕೂಲವಾಗುವಂತೆ ಕಾರ್ಯಕ್ರಮಗಳನ್ನು ರೂಪಿಸಬಹುದು. ಇವುಗಳನ್ನು ಜಾಹೀರಾತು ಎಂದು ಪರಿಗಣಿಸಿ, ಅಭ್ಯರ್ಥಿಯ ಚುನಾವಣೆ ವೆಚ್ಚಕ್ಕೆ ಸೇರಿಸಬೇಕು. ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವಾಗ, ಸಾಮಾಜಿಕ ಮಾಧ್ಯಮಗಳಲ್ಲಿಯೂ ನೀತಿಸಂಹಿತೆಯನ್ನು ಪಾಲಿಸುವುದು ಕಡ್ಡಾಯವಾಗಿದೆ. ಇದಕ್ಕೆ ವ್ಯತಿರಿಕ್ತವಾಗಿ ಸಾಮಾಜಿಕ ಮಾಧ್ಯಮಗಳ ಬಳಕೆ ಕಂಡುಬಂದರೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದರು.



ವಿಡಿಯೋ ಕಾನ್ಫರೆನ್ಸ್‌ನಲ್ಲಿ ಎಂ.ಸಿ.ಎಂ.ಸಿ ರಚನೆ ಕಾರ್ಯಗಳ ಕುರಿತು ಹೆಚ್ಚುವರಿ ಮುಖ್ಯ ಚುನಾವಣಾಧಿಕಾರಿ ವೆಂಕಟೇಶ್ ಕುಮಾರ್ ಹಾಗೂ ಪೇಯ್ಡ್ ನ್ಯೂಸ್, ಫೇಕ್ ನ್ಯೂಸ್, ಸಾಮಾಜಿಕ ಮಾಧ್ಯಮಗಳ ಕುರಿತು ಸೂರ್ಯಸೇನ್ ತರಬೇತಿ ನೀಡಿದರು.

ಈ ವೇಳೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ವಾರ್ತಾಧಿಕಾರಿ ತುಕಾರಾಂರಾವ್, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಉಪನ್ಯಾಸಕ ಎಂ.ವೈ. ರಾಘವೇಂದ್ರ, ಆಕಾಶವಾಣಿ ಕಾರ್ಯಕ್ರಮ ನಿರ್ವಾಹಕ ಎಂ.ರೇಣುಕಾ ಪ್ರಕಾಶ್ ಸೇರಿದಂತೆ ಮತ್ತಿತರರು ಇದ್ದರು.

### ತರಬೇತಿ ಕಾರ್ಯಾಗಾರದಲ್ಲಿ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್

## ತಂಬಾಕು ಮಾರಾಟಕ್ಕೆ ಉದ್ಯಮ ಪರವಾನಗಿ ಕಡ್ಡಾಯ

» ಚಿತ್ರದುರ್ಗ

ಎಲ್ಲಾ ತಂಬಾಕು ಮಾರಾಟಗಾರರು ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆಯಿಂದ ಕಡ್ಡಾಯವಾಗಿ ಉದ್ಯಮ ಪರವಾನಗಿ ಪಡೆದುಕೊಳ್ಳಬೇಕು ಎಂದು ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್ ತಿಳಿಸಿದರು.

ಇಲ್ಲಿನ ನಗರಸಭೆ ಸಭಾಂಗಣದಲ್ಲಿ ಗುರುವಾರ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಪೌರಾಡಳಿತ ಇಲಾಖೆಯ ಎಲ್ಲಾ ಪೌರಾಯುಕ್ತರು, ಮುಖ್ಯಾಧಿಕಾರಿಗಳು, ಪರಿಸರ ಅಭಿಯಂತರರು ಹಾಗೂ ಆರೋಗ್ಯ ನಿರೀಕ್ಷಣಾಧಿಕಾರಿಗಳಿಗೆ ತಂಬಾಕು ಉತ್ಪನ್ನ ಮಾರಾಟ ಉದ್ಯಮ ಪರವಾನಗಿ ನೀಡುವ ಕುರಿತು ಮತ್ತು ಕೋಟ್ಪಾ-2003ರ ಕಾಯ್ದೆಯ ಪರಿಣಾಮಕಾರಿ ಅನುಷ್ಠಾನ, ಸಾಮರ್ಥ್ಯಾಭಿವೃದ್ಧಿ ಮತ್ತು ಮೇಲ್ವಿಚಾರಣೆ ಕುರಿತ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು. ಈ ತರಬೇತಿ ಕಾರ್ಯಾಗಾರದಲ್ಲಿ ತರಬೇತಿ ಪಡೆದುಕೊಂಡು ಉದ್ಯಮ ಪರವಾನಗಿ ನೀಡುವಲ್ಲಿ ಕ್ರಮವಹಿಸಬೇಕು. ತಂಬಾಕು ಉತ್ಪನ್ನಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಿ ನಿಯಂತ್ರಣ ಮಾಡಲು ಪೌರಾಯುಕ್ತರು, ಮುಖ್ಯಾಧಿಕಾರಿಗಳು, ಪರಿಸರ ಅಭಿಯಂತರರು ಹಾಗೂ ಆರೋಗ್ಯ ನಿರೀಕ್ಷಣಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ ಸೂಚಿಸಿದರು.



ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಮಾತನಾಡಿ, ಕೋಟ್ಪಾ-2003ರ ಕಾಯ್ದೆ, ತಂಬಾಕು ಉತ್ಪನ್ನಗಳ ಸೇವನೆಯಿಂದ ಆಗುವಂತಹ ದುಷ್ಪರಿಣಾಮಗಳ ಕುರಿತು ಮತ್ತು ತಂಬಾಕು ವ್ಯಸನ ಮುಕ್ತ ಕೇಂದ್ರದಲ್ಲಿ ದೊರೆಯುವಂತಹ ಉಚಿತ ಆಪ್ತಸಮಾಲೋಚನೆ ಮತ್ತು ನಿಕೋಟಿನ್ ಗಮ್ಸ್ ನೀಡುವ ಬಗ್ಗೆ ಹಾಗೂ ನಗರ ಪ್ರದೇಶಗಳಲ್ಲಿ ಗರ್ಭಿಣಿ ಸ್ತ್ರೀಯರು ಧೂಮಪಾನ ಮಾಡುತ್ತಾರೆ. ಇದರಿಂದಾಗಿ ಮಹಿಳೆಯರಿಗೂ ಮತ್ತು ಮಗುವಿನ ಬೆಳವಣಿಗೆಗೆ ಹಾಗೂ ಆರೋಗ್ಯದ ಮೇಲೆ ಪ್ರಭಾವ ಬೀರುತ್ತದೆ ಎಂದು ಸವಿವರವಾಗಿ ಮಾಹಿತಿ ನೀಡಿದರು.

ರಾಜ್ಯ ತಂಬಾಕು ನಿಯಂತ್ರಣ ಕೋಶದ ವಿಭಾಗೀಯ ಸಂಯೋಜಕ ಮಹಂತೇಶ್ ಅವರು ಕೋಟ್ಪಾ-2003ರ ಕಾಯ್ದೆಯ ಕುರಿತು ಹಾಗೂ ತಂಬಾಕು ಮಾರಾಟಗಾರರಿಗೆ ಉದ್ಯಮ ಪರವಾನಗಿ ನೀಡುವ ಕುರಿತು ಸವಿವರವಾಗಿ ತರಬೇತಿ ನೀಡಿದರು ಮತ್ತು ಎಲ್ಲಾ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ನಗರ ತಂಬಾಕು ನಿಯಂತ್ರಣ ಸಮಿತಿ ರಚಿಸಿ, ಯೋಜನಾ ನಿರ್ದೇಶಕರು, ನಗರಾಭಿವೃದ್ಧಿ ಕೋಶದಿಂದ ಜಿಲ್ಲಾ ತಂಬಾಕು ನಿಯಂತ್ರಣ ಕೋಶಕ್ಕೆ ಸಲ್ಲಿಸುವಂತೆ ತರಬೇತಿ ಕಾರ್ಯಾಗಾರದಲ್ಲಿ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರ್, ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ್, ಸಮಾಜ ಕಾರ್ಯಕರ್ತ ಕೆ.ಎಂ.ತಿಪ್ಪೇಸ್ವಾಮಿ ಸೇರಿದಂತೆ ಪೌರಾಡಳಿತ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಇದ್ದರು.

## ಮಾ.3 ರಿಂದ 6ರವರೆಗೆ ಪಲ್ಸ್ ಪೋಲಿಯೋ ಕಾರ್ಯಕ್ರಮ



» ದಾವಣಗೆರೆ

ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವು ಮಾರ್ಚ್ 3 ರಿಂದ 6 ರ ವರೆಗೆ ನಡೆಯಲಿದ್ದು ಈ ಅವಧಿಯಲ್ಲಿ ಯಾವುದೇ ಮಕ್ಕಳು ಲಸಿಕೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಪೂರ್ವಭಾವಿ ಸಿದ್ದತಾ ಸಭೆ ಅಧ್ಯಕ್ಷತೆ ವಹಿಸಿ ಮಾತಾನಾಡಿದರು. ಅವರು ಪ್ರಸಕ್ತ ಸಾಲಿನ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಪೋಲಿಯೋ ನಿರ್ಮೂಲನೆಗೆ ಸಾರ್ವತ್ರಿಕ ಲಸಿಕಾಕರಣ ಬಹಳ ಪ್ರಮುಖವಾಗಿರುತ್ತದೆ.

ಮಾ.3 ರಂದು ಜಿಲ್ಲೆಯ ಎಲ್ಲಾ ಲಸಿಕಾ ಬೂತ್‌ಗಳಲ್ಲಿ 5 ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಲಸಿಕೆಯಯನ್ನು ಹಾಕಲಾಗುವುದು. ಹಾಗೂ ಮಾ.4 ರಿಂದ 6 ರವರೆಗೆ ಮೂರು ದಿನಗಳ ಕಾಲ ಮನೆ ಮನೆಗೆ ಭೇಟಿ ನೀಡಿ ಬೂತ್‌ನಲ್ಲಿ ಬಿಟ್ಟುಹೋದ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಲಾಗುವುದು. ಲಸಿಕೆ ಹಾಕಿಸಲು ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಹೆಚ್ಚು ಕೆಲಸ ನಿರ್ವಹಿಸಬೇಕೆಂದರು.

ಪೋಲಿಯೋ ಲಸಿಕೆ ಹಾಕಲು ನಗರ ಪ್ರದೇಶದಲ್ಲಿ 53764 ಹಾಗೂ ಗ್ರಾಮೀಣ ಭಾಗದಲ್ಲಿ 86372 ಮಕ್ಕಳು ಸೇರಿ 140136 ಮಕ್ಕಳಿಗೆ ಲಸಿಕೆ ಹಾಕಲು ಗುರಿ ಹೊಂದಲಾಗಿದೆ. ಲಸಿಕೆಗಾಗಿ 1121 ಬೂತ್‌ಗಳು, 28 ಕಡೆ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣಗಳು, 16 ಮೊಬೈಲ್ ಬೂತ್‌ಗಳನ್ನು ಸಿದ್ದಪಡಿಸಲಾಗಿದ್ದು 2245 ಲಸಿಕಾ ಕಾರ್ಯಕರ್ತರು ಮತ್ತು 219 ಮೇಲ್ವಿಚಾರಕರನ್ನು ಇದಕ್ಕಾಗಿ ನೇಮಿಸಲಾಗಿದೆ, ತಾಯಂದಿರು ಹಾಗೂ ಪೋಷಕರು ತಮ್ಮ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಬೇಕೆಂದರು.

## ಚಳ್ಳಕೆರೆ ನಗರದ ಪ್ರಮುಖ ರಸ್ತೆಗಳಲ್ಲಿ ಪುಟ್‌ಬಾತ್ ತೆರವು

» ಚಳ್ಳಕೆರೆ

ಸಾರ್ವಜನಿಕರು ಮತ್ತು ವಾಹನಗಳ ಸಂಚಾರಕ್ಕೆ ಅಡಚಣೆ ಉಂಟಾಗುವ ನಿಟ್ಟಿನಲ್ಲಿ ಸಾರ್ವಜನಿಕರ ಒತ್ತಾಯದಂತೆ ಇಲ್ಲಿನ ಪೊಲೀಸರು ಪುಟ್‌ಬಾತ್‌ಗಳಲ್ಲಿವ್ಯಾಪಾರ ಮಾಡುವ ವ್ಯಾಪಾರಸ್ಥರಿಗೆ ರಸ್ತೆಯನ್ನು ಬಿಟ್ಟು ವ್ಯಾಪಾರ ಮಾಡಿಕೊಳ್ಳುವಂತೆ ಸೂಚನೆ ನೀಡುತ್ತಿದ್ದರಲ್ಲದೆ, ಯಾರಾದರೂ ಅನಗತ್ಯವಾಗಿ ರಸ್ತೆಗೆ ಬಂದಲ್ಲಿ ಅವರನ್ನು ಹಿಂದೆಸರಿಸುವ ಕೆಲಸವನ್ನು ನಿರಂತರವಾಗಿ ಮಾಡುತ್ತಿದ್ದಾರೆ. ಇತ್ತೀಚಿನ ದಿನಗಳಲ್ಲಿ ಚಳ್ಳಕೆರೆ ನಗರದ ಚಿತ್ರದುರ್ಗ, ಬಳ್ಳಾರಿ, ಪಾವಗಡ, ಬೆಂಗಳೂರು ರಸ್ತೆಗಳಲ್ಲಿ ವಾಹನ ಸಂಚಾರ ಮತ್ತು ಸಾರ್ವಜನಿಕರ ಓಡಾಟ ನಿರೀಕ್ಷೆಗೂ ಮೀರಿ ಹೆಚ್ಚಿದೆ. ವಿಶೇಷವಾಗಿ ಬೆಳಗ್ಗೆ ಮತ್ತು ಸಂಜೆಯ ವೇಳೆಯಲ್ಲಿ ಸಾರ್ವಜನಿಕರು ರಸ್ತೆದಾಟುವುದು ಕಷ್ಟವಾಗಿದೆ. ಆಗಿದಾಂಗ ಅಪಘಾತಗಳೂ ಸಹ ಸಂಭವಿಸುತ್ತಿವೆ. ಆದ್ದರಿಂದ ಪುಟ್‌ಬಾತ್ ಆಕ್ರಮಣ ಮಾಡಿಕೊಂಡು ವ್ಯಾಪಾರ ಮಾಡುವ ವ್ಯಾಪಾರಸ್ಥರಿಗೆ ತಿಳುವಳಿಕೆ ನೀಡಿ ಅವರನ್ನು ಹಿಮೆಟ್ಟಿಸುವ ಕೆಲಸ ಪೊಲೀಸ್ ಇಲಾಖೆಯಿಂದ ಪ್ರತಿನಿತ್ಯ ಆಗುತ್ತಿದೆ. ಈಗಾಗಲೇ ಬೆಂಗಳೂರು ಮತ್ತು ಪಾವಗಡ ರಸ್ತೆಯಲ್ಲಿ ಪುಟ್‌ಬಾತ್ ತೆರವು ಕಾರ್ಯ ಆರಂಭವಾಗಿದೆ.






ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಅಡಿಯಲ್ಲಿ ಹೊಸದುರ್ಗ ತಾಲ್ಲೂಕಿನ ಶ್ರೀರಾಂಪುರದಲ್ಲಿ ಸುರಾಕ್ಷ ಮೊತ್ತ ಮಂಜೂರಾತಿ ಪತ್ರವನ್ನು ಶುಕ್ರವಾರ ಕ್ಷೇತ್ರ ಯೋಜನಾಧಿಕಾರಿ ಶಿವಣ್ಣ .ಎಸ್ ವಿತರಣೆ ಮಾಡಿದರು

**ಪ್ರಮುಖ ಸುದ್ದಿ**

### ಲೋಕಸಭಾ ಚುನಾವಣೆ-2024: ಮುದ್ರಣ ಮಾಲೀಕರು, ಕೇಬಲ್ ಟಿ.ವಿ. ಆಪರೇಟರ್‌ಗಳೊಂದಿಗೆ ಸಭೆ

## ಪ್ಲಾಸ್ಟಿಕ್ ಮುಕ್ತ ಚುನಾವಣೆಗೆ ಸಹಕರಿಸಲು ಮನವಿ

» ದಾವಣಗೆರೆ

ಮುಂಬರುವ ಲೋಕಸಭಾ ಚುನಾವಣಾ ನೀತಿ ಸಂಹಿತೆ ಜಾರಿಯಾದಾಗಿನಿಂದ ಮುದ್ರಕರು ಹಾಗೂ ಕೇಬಲ್ ಆಪರೇಟರ್‌ಗಳು ಚುನಾವಣಾ ನಿಯಮಗಳ ಪಾಲನೆ ಕಡ್ಡಾಯವಾಗಿದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮುಂಬರುವ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಮುದ್ರಣ ಮಾಲಿಕರು, ಕೇಬಲ್ ಆಪರೇಟರ್‌ಗಳೊಂದಿಗೆ ಸಭೆ ನಡೆಸಿದರು. ಚುನಾವಣಾ ಸಂಬಂಧಿ ಕರಪತ್ರಗಳು, ಪೋಸ್ಟರ್‌ಗಳನ್ನು ಮುದ್ರಣ ಮಾಡುವ ಮುದ್ರಕರು ಕರಪತ್ರ, ಪೋಸ್ಟರ್ ಹಿಂಭಾಗದಲ್ಲಿ ಮುದ್ರಣ ಮಾಲಿಕರ ಸಂಪೂರ್ಣ ವಿವರ ಹಾಗೂ ಮುದ್ರಣ ಮಾಡುತ್ತಿರುವ ಪ್ರತಿಗಳ ಸಂಖ್ಯೆಯನ್ನು ಸ್ಪಷ್ಟವಾಗಿ ನಮೂದಿಸಬೇಕೆಂದರು.

ಮುದ್ರಣಕ್ಕೆ ನೀಡುವವರಿಂದ ಅಪೆಂಡಿಕ್ಸ್-ಎ ರಡಿ ಅರ್ಜಿಯ ಸಂಪೂರ್ಣ ವಿವರ ಪಡೆದಿರಬೇಕು. ಮುದ್ರಣ ಮಾಡಿದ ಎರಡು ದಿನಗಳೊಳಗಾಗಿ ಮುದ್ರಕರು ಅಪೆಂಡಿಕ್ಸ್-ಬಿ ರಡಿ ಜಿಲ್ಲಾ ದಂಡಾಧಿಕಾರಿಗಳಿಗೆ ಸಲ್ಲಿಸಬೇಕು. ಫ್ಲೆಕ್ಸ್ ಸೇರಿದಂತೆ, ಪೋಸ್ಟರ್‌ಗಳನ್ನು ಮುದ್ರಣ ಮಾಡುವಾಗ ಪ್ಲಾಸ್ಟಿಕ್ ಬಳಸಬಾರದು. ಫ್ಲೆಕ್ಸ್ ಮುದ್ರಣವನ್ನು ಇಕೋಪ್ರೆಂಡ್ಲಿ ಕ್ಲಾತ್‌ನಲ್ಲಿ ಮುದ್ರಣ ಮಾಡುವ ಮೂಲಕ 2024 ರ ಲೋಕಸಭಾ ಚುನಾವಣೆಯನ್ನು ಪ್ಲಾಸ್ಟಿಕ್ ಮುಕ್ತ ಚುನಾವಣೆಯನ್ನಾಗಿ ಮಾಡೋಣ ಎಂದರು.



ಕೇಬಲ್ ಆಪರೇಟರ್‌ಗಳು ಚುನಾವಣೆಗೆ ಸಂಬಂಧಿಸಿದ ಜಾಹಿರಾತುಗಳನ್ನು ಪ್ರಸಾರ ಮಾಡುವಾಗ ಜಿಲ್ಲಾ ಎಂ.ಸಿ.ಎಂ.ಸಿ.ಯಿಂದ ಕಡ್ಡಾಯವಾಗಿ ಅನುಮತಿ ಪಡೆದುಕೊಳ್ಳಬೇಕು. ಯಾವುದೇ ವಿದ್ಯುನ್ಮಾನ ಮಾಧ್ಯಮದಲ್ಲಿ ಜಾಹಿರಾತು ಪ್ರಕಟಿಸುವಾಗ ಜಾಹಿರಾತು ವಿವರದ ಅನುವಾದಿತ ಯಥಾಪ್ರತಿಯೊಂದಿಗೆ ರಾಷ್ಟ್ರೀಯ ಪಕ್ಷ, ಅಭ್ಯರ್ಥಿಯಾಗಿದ್ದಲ್ಲಿ ಕನಿಷ್ಠ 3 ದಿನ ಮೊದಲು, ಇತರೆ ಪಕ್ಷ, ಪಕ್ಷೇತರ ಅಭ್ಯರ್ಥಿಯಾಗಿದ್ದಲ್ಲಿ 7 ದಿನ ಮೊದಲು ಅನುಬಂಧ-ಎ ಅರ್ಜಿ ರಡಿ ಸಲ್ಲಿಸಬೇಕು. ಅನುಬಂಧ.ಬಿ ರಡಿ ಅನುಮತಿ ನೀಡಲಾಗುತ್ತದೆ. ಈ ಸಮಿತಿಗೆ ಜಿಲ್ಲಾಧಿಕಾರಿಯವರು ಅಧ್ಯಕ್ಷರಾಗಿರುತ್ತಾರೆ. ಸಾಮಾಜಿಕ ಜಾಲತಾಣದಲ್ಲಿ ಜಾಹಿರಾತು ಪ್ರಸಾರ ಮಾಡಲು ಸಹ ರಾಜಕೀಯ ಸಂಬಂಧಿ ಜಾಹಿರಾತುಗಳಿಗೆ ಅನುಮತಿ ಕಡ್ಡಾಯ ಎಂದರು. ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್, ಅಪರ ಜಿಲ್ಲಾಧಿಕಾರಿ ಸೈಯ್ಯದಾ ಅಫ್ರೀನ್ ಭಾನು ಎಸ್.ಬಳ್ಳಾರಿ ಹಾಗೂ ಮುದ್ರಕರಾದ ಮುರುಘೇಶಪ್ಪ.ಕೆ, ಫ್ಲೆಕ್ಸ್ ಮುದ್ರಕರ ಸಂಘದ ಅಧ್ಯಕ್ಷ ಡಿ.ಸಿ.ಶ್ರೀನಿವಾಸ್, ದಾವಣಗೆರೆ ವಿಜನ್ ಚಿದಾನಂದ.ಕೆ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

---

**ಫಾಸ್ಟ್ ನ್ಯೂಸ್**

### ಸಂವಿಧಾನ ಜಾಗೃತಿ ಜಾಥಾ: ನೇರ ಪ್ರಸಾರ ವೀಕ್ಷಣೆ

» ಚಿತ್ರದುರ್ಗ

ಸಂವಿಧಾನ ದಿನಾಚರಣೆ ಪ್ರಯುಕ್ತ ಬೆಂಗಳೂರಿನ ಅರಮನೆ ಮೈದಾನದಲ್ಲಿ ಫೆ.24 ಮತ್ತು 25ರಂದು "ಸಂವಿಧಾನ ಜಾಗೃತಿ ಜಾಥಾ" ಕಾರ್ಯಕ್ರಮ ನಡೆಯಲಿದ್ದು, ಈ ಕಾರ್ಯಕ್ರಮದ ನೇರ ಪ್ರಸಾರ ವೀಕ್ಷಿಸಲು ಚಿತ್ರದುರ್ಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಅವಕಾಶ ಕಲ್ಪಿಸಲಾಗಿದೆ.

ಸಂವಿಧಾನ ಜಾಗೃತಿ ಜಾಥಾ ಸಮಾವೇಶದ ನೇರ ಪ್ರಸಾರ ಹಾಗೂ ಸಂವಿಧಾನದ ಕುರಿತು ಇತರೆ ಕಾರ್ಯಕ್ರಮಗಳನ್ನು ಎಲ್ಲಾ ಸಾರ್ವಜನಿಕರು ಫೆ.24 ಮತ್ತು 25ರಂದು ಎರಡು ದಿನ ಚಿತ್ರದುರ್ಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದ್ದು, ನೇರ ಪ್ರಸಾರವನ್ನು ಎಲ್ಲಾ ಸಾರ್ವಜನಿಕರು ಆಗಮಿಸಿ ವೀಕ್ಷಿಸುವಂತೆ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಕೋರಿದ್ದಾರೆ.

### ವೃದ್ದೆ ಹಾಗೂ ಯುವಕ ಕಾಣೆ: ಪತ್ತೆಗೆ ಮನವಿ

» ಚಿತ್ರದುರ್ಗ

ಎರೆಡು ಪ್ರತ್ಯೇಕ ಪ್ರಕರಣಗಳಲ್ಲಿ ವೃದ್ದೆ ಹಾಗೂ ಯುವಕ ಕಾಣೆಯಾಗಿರುವ ಕುರಿತು ಭರಮಸಾಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿವೆ.

ಫೆ.04 ರಂದು ಹಂಪನೂರು ಗ್ರಾಮದ ಕಂಪಳಮ್ಮ ಗಂಡ ಲೇಟ್ ರಂಗಪ್ಪ (85ವರ್ಷ) ಕಾಣೆಯಾಗಿದ್ದು, 5 ಅಡಿ ಎತ್ತರ, ಕೋಲು ಮುಖ, ಎಣ್ಣೆಗೆಂಪು ಬಣ್ಣ ಸಾಧಾರಣ ಮೈಕಟ್ಟು ಹೊಂದಿರುವ ಕಂಪಳಮ್ಮ ಕನ್ನಡ ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ನೀಲಿ ಬಣ್ಣದ ಸೀರೆ ಮತ್ತು ಕಪ್ಪು ಬಣ್ಣದ ರವಿಕೆ ಧರಿಸಿರುತ್ತಾರೆ. ಫೆ.17 ರಂದು ಹಿರೇಬೆನ್ನೂರು ಗ್ರಾಮದ ನಾಗರಾಜ್ ತಂದೆ ಲೇಟ್ ಗೋವಿಂದಪ್ಪ (26ವರ್ಷ) ಕಾಣೆಯಾದ್ದು, 5.2 ಅಡಿ ಎತ್ತರ, ಕೋಲು ಮುಖ, ತೆಳ್ಳನೆ ಶರೀರ, ಎಣ್ಣೆಗೆಂಪು ಮೈಬಣ್ಣ ಹೊಂದಿರುವ ನಾಗರಾಜ್ ಕನ್ನಡ ಭಾಷೆ ಮಾತನಾಡುತ್ತಾನೆ. ಮನೆಯಿಂದ ಹೋಗುವಾಗ ಅಡ್ಡ ಕೆಂಪು ಪಟ್ಟಿಯುಳ್ಳ ತುಂಬು ತೋಳಿನ ಹಾಲಿನ ಕೆನೆ ಬಣ್ಣದ ಟೀ ಶರ್ಟ್ ಹಾಗೂ ಕಪ್ಪು ಬಣ್ಣದ ಫ್ಯಾಂಟ್ ಧರಿಸಿರುತ್ತಾನೆ. ಮೇಲ್ಕಂಡ ಚಹರೆಯುಳ್ಳ ವ್ಯಕ್ತಿಗಳ ಸುಳಿವು ದೊರೆತಲ್ಲಿ, ಭರಮಸಾಗರ ಪೋಲಿಸ್ ಠಾಣಾ ದೂರವಾಣಿ ಸಂಖ್ಯೆ 08194-258421, ಮೊಬೈಲ್ ಸಂಖ್ಯೆ 9480803163, ಚಿತ್ರದುರ್ಗ ಕಂಟ್ರೋಲ್ ರೂಂ ದೂರವಾಣಿ ಸಂಖ್ಯೆ 08194-222782, 08194-100. ಪೋಲಿಸ್ ಉಪಾಧೀಕ್ಷಕ ಕಚೇರಿ ದೂರವಾಣಿ ಸಂಖ್ಯೆ 9480803120, ಪೋಲಿಸ್ ಅಧೀಕ್ಷಕರು ಕಚೇರಿ ದೂರವಾಣಿ ಸಂಖ್ಯೆ 9480803101 ಗೆ ಸಂಪರ್ಕಿಸಲು ಪ್ರಕಟಣೆಯಲ್ಲಿ ಕೋರಿದೆ.

### ಜೆಡಿಎಸ್ ಬಿಜೆಪಿ ಮೈತ್ರಿ: ಕಾರ್ಯಕರ್ತರೊಂದಿಗೆ ಚುನಾವಣೆ ಗೆಲುವಿನ ಬಗ್ಗೆ ಚರ್ಚಿಸಲು ಇಂದು ಸಭೆ

» ಚಳ್ಳಕೆರೆ

ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕದಲ್ಲಿ ಹೆಚ್ಚು ಸ್ಥಾನಗಳನ್ನು ಗಳಿಸುವ ನಿಟ್ಟಿನಲ್ಲಿ ಜೆಡಿಎಸ್-ಬಿಜೆಪಿ ಮೈತ್ರಿ ಕೂಟ ರಚನೆಯಾಗಿದ್ದು, ಚುನಾವಣೆ ಹಿನ್ನೆಲೆಯಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರಿಗೆ ಲೋಕಸಭಾ ಚುನಾವಣೆಯ ಬಗ್ಗೆ ಮಾಹಿತಿ ನೀಡಲು ತಾಲ್ಲೂಕು ಮಟ್ಟದ ಕಾರ್ಯಕರ್ತರ ಸಭೆಯನ್ನು ಫೆ.24ರ ಶನಿವಾರ ಬೆಳಗ್ಗೆ 10.30ಕ್ಕೆ ದಲ್ಲಾಲರ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಪಿ.ತಿಪ್ಪೇಸ್ವಾಮಿ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ಜೆಡಿಎಸ್-ಬಿಜೆಪಿ ಮೈತ್ರಿಯಿಂದ ರಾಜ್ಯದ 28 ಸ್ಥಾನಗಳಲ್ಲಿ ಹೆಚ್ಚು ಸ್ಥಾನಗಳಲ್ಲಿ ಗೆಲುವು ಸಾಧಿಸಲು ಮೈತ್ರಿ ಸಹಕಾರಿಯಾಗಿದ್ದು, ಈ ನಿಟ್ಟಿನಲ್ಲಿ ಕಾರ್ಯಕರ್ತರು, ಮುಖಂಡರು ಕಾರ್ಯನಿರ್ವಹಿಸಬೇಕಿದೆ. ಈ ಹಿನ್ನೆಲೆಯಲ್ಲಿ ಕಾರ್ಯಕರ್ತರಿಗೆ ಹಲವಾರು ಮಾಹಿತಿ ನೀಡಿ ಚುನಾವಣೆಯಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸಲು ಸಭೆ ಹಮ್ಮಿಕೊಂಡಿದೆ ಎಂದರು. ಜೆಡಿಎಸ್ ರಾಜ್ಯಪರಿಷತ್ ಸದಸ್ಯ ಡಿ.ಯಶೋಧರ, ಮಾಜಿ ಶಾಸಕ ಪಾವಗಡ ತಿಮ್ಮರಾಜಪ್ಪ, ಜಿಲ್ಲಾಧ್ಯಕ್ಷ ಜಯಣ್ಣ, ರಾಜ್ಯ ಪ್ರಧಾನ ಕಾರ್ಯದರ್ಶಿ ಕಾಂತರಾಜು, ಪರಾಜಿತ ಅಭ್ಯರ್ಥಿ ಎಂ.ರವೀಶ್‌ಕುಮಾರ್, ರವೀಂದ್ರಪ್ಪ, ಕಾರ್ಯಾಧ್ಯಕ್ಷ ಹೆಗ್ಗೆರೆ ಆನಂದಪ್ಪ, ನಗರಸಭಾ ಸದಸ್ಯರಾದ ಸಿ.ಶ್ರೀನಿವಾಸ್, ವಿ.ವೈ.ಪ್ರಮೋದ್, ಸಿ.ಎಂ.ವಿಶುಕುಮಾರ್ ಮುಂತಾದವರು ಸಭೆಯಲ್ಲಿ ಭಾಗವಹಿಸುವರು.

### ಫೆ.26 ರಂದು ಪಿಎಂಇಜಿಪಿ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಖಾದಿ ಮತ್ತು ಗ್ರಾಮೋದ್ಯೋಗ ಆಯೋಗ ಇವರ ಸಹಯೋಗದಲ್ಲಿ ಇದೇ ಫೆ.26ರಂದು ಮಧ್ಯಾಹ್ನ 2ಕ್ಕೆ ಚಿತ್ರದುರ್ಗ ನಗರದ ಸ್ಟೇಡಿಯಂ ರಸ್ತೆಯ ಸರ್ಕಾರಿ ಐಟಿಐ ಕಾಲೇಜಿನಲ್ಲಿ "ಪಿಎಂಇಜಿಪಿ ಯೋಜನೆ" ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

# ನೀರಿನ ಅಸಮರ್ಪಕ ಬಳಕೆಯಿಂದ ಬರ
# ಪ್ರತಿಯೊಬ್ಬರು ಜಲಸಂರಕ್ಷಣೆಗೆ ಒತ್ತು ನೀಡಿ

» ಚಿತ್ರದುರ್ಗ

ನೀರಿನ ಅಸಮರ್ಪಕ ಬಳಕೆಯಿಂದ ನೀರಿನ ಸಮಸ್ಯೆ ಹಾಗೂ ಬರ ಹೆಚ್ಚಾಗುತ್ತಿದೆ. ಪ್ರತಿಯೊಬ್ಬರು ಜಲರಕ್ಷಕರಾಗಿ ಎಚ್ಚೆತ್ತುಕೊಂಡಾಗ ಮಾತ್ರ ಅಮೂಲ್ಯವಾದ ನೀರನ್ನು ಜೋಪಾನವಾಗಿ ಕಾಪಾಡಲು ಸಾಧ್ಯ ಎಂದು ಚಿತ್ರದುರ್ಗ ಆಕಾಶವಾಣಿ ಕಾರ್ಯಕ್ರಮ ಮುಖ್ಯಸ್ಥರಾದ ಎಂ.ರೇಣುಕಾ ಪ್ರಕಾಶ್ ತಿಳಿಸಿದರು.

ಇಲ್ಲಿನ ಆಕಾಶವಾಣಿ ಕೇಂದ್ರದಲ್ಲಿ ಶುಕ್ರವಾರ ಜಿಯೋ ರೈನ್ ವಾಟರ್ ಬೋರ್ಡ್ ಮತ್ತು ಆಕಾಶವಾಣಿ ವತಿಯಿಂದ ನಡೆದ ಜಿಯೋ ರೈನ್ ವಾಟರ್ ಬೋರ್ಡ್ ಜಲ ರಕ್ಷಕರು ಪ್ರಾಯೋಜಿತ ಸರಣಿಯ ಬಹುಮಾನ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹಲವಾರು ನದಿ, ಕೆರೆಗಳಲ್ಲಿ ನೀರು ಕಡಿಮೆಯಾಗುತ್ತಿದ್ದು, ನೀರಿನ ಸಮಸ್ಯೆ ಸಾರ್ವತ್ರಿಕ ಸಮಸ್ಯೆಯಾಗಿದೆ. ಪ್ರತಿಯೊಬ್ಬರು ಜಲಸಂರಕ್ಷಣೆಗೆ ಒತ್ತು ನೀಡಬೇಕು. ಮಳೆ ನೀರು ಕೊಯ್ಲು ಮಾಡುವುದರಿಂದ ನೀರಿಗೆ ಬೇರೆಯವರ ಮೇಲೆ ಅವಲಂಬಿತರಾಗುವುದು ತಪ್ಪಲಿದೆ. ಜಲ ರಕ್ಷಕ ಸರಣಿ ಕಾರ್ಯಕ್ರಮದಲ್ಲಿ ವಿಜೇತರಾದವರು ಮುಂದಿನ ದಿನಗಳಲ್ಲಿ ಜಲ ತಜ್ಞರು ಹಾಗೂ ಜಲರಕ್ಷಕರಾಗಬೇಕು ಎಂದು ಕಿವಿಮಾತು ಹೇಳಿದರು.




ಜಿಲ್ಲಾ ವಾರ್ತಾಧಿಕಾರಿ ಬಿ.ವಿ. ತುಕಾರಾಂರಾವ್ ಮಾತನಾಡಿ, ನೀರಿಲ್ಲದ ಬದುಕು ಊಹಿಸಿಕೊಳ್ಳಲು ಸಾಧ್ಯವಿಲ್ಲ. ನೀರಿಗಾಗಿ ದೇಶ ದೇಶಗಳ ನಡುವೆ ಯುದ್ಧವಾದರೂ ಆಶ್ಚರ್ಯವಿಲ್ಲ. ಜನ-ಜಾನುವಾರುಗಳಿಗೆ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗಬಾರದು ಎಂದು ಜಿಲ್ಲಾಡಳಿತದಿಂದ ಕ್ರಿಯಾ ಯೋಜನೆ ಸಿದ್ಧವಾಗಿದೆ. ಪರಿಸರ ಕಾಡುಗಳ ನಾಶ. ಜಾಗತೀಕರಣದಿಂದ ನಗರೀಕರಣದೆಡೆಗೆ ಸಾಗುತ್ತಿರುವುದು ಕೂಡ ನೀರಿನ ಕೊರತೆಗೆ ಕಾರಣವಾಗಿದೆ. ಸರ್ಕಾರದ ಎಲ್ಲಾ ಪ್ರಯತ್ನಗಳಿಗೆ ಜನಸಾಮಾನ್ಯರು ಕೈಜೋಡಿಸಬೇಕು. ಭೂಮಿಯಿಂದ ನೀರನ್ನು ಮೇಲಕ್ಕೆತ್ತುವ ಕೆಲಸವಾಗುತ್ತಿದೆಯೇ ವಿನಃ ನೀರನ್ನು ಇಂಗಿಸುವ ಕಡೆ ಯಾರು ಗಮನ ಕೊಡದಿರುವುದು ಬೇಸರದ ಸಂಗತಿ ಎಂದು ವಿಷಾಧಿಸಿದರು.

ಪ್ಲಾಸ್ಟಿಕ್ ಬಳಕೆ ಹೆಚ್ಚಾಗುತ್ತಿರುವುದು ಪರಿಸರಕ್ಕೆ ಮಾರಕವಾಗಿದೆ. ಪ್ರತಿ ಮನೆಗಳಲ್ಲಿಯೂ ಮಳೆ ನೀರು ಕೊಯ್ಲು ಅಳವಡಿಸಿಕೊಂಡರೆ ನೀರಿನ ಸಮಸ್ಯೆಗೆ ಉಪಾಯ ಕಂಡುಕೊಳ್ಳಬಹುದು ಎಂದು ಹೇಳಿದರು.

ಅಂತರ್ಜಲ ತಜ್ಞ ಎನ್. ಜೆ.ದೇವರಾಜರೆಡ್ಡಿ ಮಾತನಾಡಿ, ಆಕಾಶವಾಣಿ ಕಾರ್ಯಕ್ರಮದಲ್ಲಿ ನೀರಿನ ಮಿತ ಬಳಕೆ ಹಾಗೂ ಸಂರಕ್ಷಣೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಸಾಕಷ್ಟು ಪ್ರಯೋಜನಕಾರಿಯಾಗಿದೆ. ಆಕಾಶವಾಣಿಯಲ್ಲಿ ಸರಣಿ ಕಾರ್ಯಕ್ರಮ ನೀಡಬೇಕಾದರೆ ಸಾಕಷ್ಟು ಸಿದ್ಧತೆ ಮಾಡಿಕೊಳ್ಳಬೇಕು. ಚಿತ್ರದುರ್ಗ ಆಕಾಶವಾಣಿಗೆ ತನ್ನದೆ ಆದ ಇತಿಹಾಸವಿದೆ. ಇಲ್ಲಿ ನೀಡಿದ ಮೂರು ಕಾರ್ಯಕ್ರಮಗಳಿಂದ ವಿಭಿನ್ನವಾದ ಪಾಠ ಕಲಿತಿದ್ದೇನೆ. ಊಟಕ್ಕೆ ಸಮಸ್ಯೆಯಿಲ್ಲ. ಸಾಕಷ್ಟು ಆಹಾರ ಧಾನ್ಯಗಳಿವೆ. ಆದರೆ ನಮ್ಮ ಮುಂದಿರುವ ಸವಾಲೆಂದರೆ ಜಲ ರಕ್ಷಿಸುವುದು ಎನ್ನುವುದನ್ನು ಯಾರು ಮರೆಯಬಾರದು. ಮಳೆ ನೀರು ಕೊಯ್ಲು ಕುರಿತು ಮನೆ ಮನೆಗಳಲ್ಲಿ ಜಾಗೃತಿ ಮೂಡಬೇಕಿದೆ ಎಂದರು.

ಜಲರಕ್ಷಕ ಕಾರ್ಯಕ್ರಮ ನಿರೂಪಕರಾದ ದ್ಯಾಮಲಾಂಬ ಉಪಸ್ಥಿತರಿದ್ದರು. ಜಲರಕ್ಷಕರು ಆಕಾಶವಾಣಿ ಕಾರ್ಯಕ್ರಮ ಸರಣಿಯ ಸ್ಪರ್ಧೆಯಲ್ಲಿ ವಿಜೇತರಾದ ಬಾಗಲಕೋಟೆ ಜಿಲ್ಲೆ ಮುದೋಳ ತಾಲ್ಲೂಕಿನ ಸಂಗಪ್ಪ ತೇರದಾಳ್, ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ತಾಲ್ಲೂಕಿನ ಜುಂಜರಗುಂಟೆ ಗ್ರಾಮದ ಬಿ.ಶ್ರೇಯಸ್, ನರಸಿಂಹಸ್ವಾಮಿ, ಚಿತ್ರದುರ್ಗ ನಗರದ ಚಿಕ್ಕಪೇಟೆಯ ರೂಪ ಪಾಂಡುರಂಗರಾವ್, ಗೋನೂರು ಗ್ರಾಮದ ಉಷ ಎಂ.ಮಂಜಣ್ಣ, ಬಚ್ಚಬೋರನಹಟ್ಟಿಯ ಸಣ್ಣಬೋರಯ್ಯ, ನಗರದ ಕೆ.ಮೂಗಬಸಪ್ಪ, ಮೊಳಕಾಲ್ಮುರು ತಾಲ್ಲೂಕಿನ ಓಬಣ್ಣ, ಪಾಪಣ್ಣ, ಹಿರಿಯೂರು ತಾಲ್ಲೂಕಿನ ಗಿರೀಶ್, ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರ ಗ್ರಾಮದ ಸುಬ್ರಾಯ ಎಲ್.ಹೆಗ್ಡೆ ಇವರುಗಳಿಗೆ ಬಹುಮಾನ ವಿತರಿಸಲಾಯಿತು.

# ಭದ್ರಾ ಅಚ್ಚುಕಟ್ಟು ರೈತರೊಂದಿಗೆ ಡಿಸಿ ಸಭೆ

## ಭದ್ರಾ ಬಲದಂಡೆ ಕಾಲುವೆಯಲ್ಲಿ ಕೊನೆಭಾಗದ ರೈತರಿಗೆ ನೀರು ತಲುಪಿಸಲು ಕ್ರಮ

» ದಾವಣಗೆರೆ

ಈ ಭಾರಿಯ ಮಳೆಕೊರತೆಯಿಂದ ಭದ್ರಾ ಜಲಾಶಯದಲ್ಲಿ ನೀರಿನ ಸಂಗ್ರಹ ಕಡಿಮೆಯಾಗಿದ್ದರಿಂದ ಬೇಸಿಗೆ ಹಂಗಾಮಿನಲ್ಲಿ ಬೆಳೆದಿರುವ ತೋಟಗಾರಿಕೆ ಬೆಳೆಗಳಿಗೆ ಹಾಗೂ ಕುಡಿಯುವ ನೀರಿಗಾಗಿ ಸರದಿಯಲ್ಲಿ ನೀರು ಬಿಡುಗಡೆ ಮಾಡಲಾಗಿದ್ದು ಕೊನೆಭಾಗದ ರೈತರಿಗೆ ನೀರು ತಲುಪದೇ ಸಂಕಷ್ಟ ಎದುರಿಸುತ್ತಿದ್ದು ಕೊನೆ ಭಾಗದ ರೈತರಿಗೆ ನೀರು ಕೊಡಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ತುಂಗಭದ್ರಾ ಸಭಾಂಗಣದಲ್ಲಿ ತ್ಯಾವಣಿಗಿ, ಮೆಳ್ಳೆಕಟ್ಟೆ, ಹಿರೇಮಳಲಿ, ವಲಯ 2 ರ ರೈತ ಮುಖಂಡರು, ರೈತರೊಂದಿಗೆ ಸಭೆ ನಡೆಸಿ ಮಾತನಾಡಿದರು. ಫೆಬ್ರವರಿ 16 ರಂದು ಕಾಲುವೆಗೆ ನೀರು ಬಿಟ್ಟಿದ್ದರೂ ಕೊನೆ ಭಾಗದ ರೈತರಿಗೆ ನೀರು ತಲುಪಿರುವುದಿಲ್ಲ, ನೀರು ಬಂದಿದ್ದರೂ ಸರಿಯಾಗಿ ಹಾಯಿಸಲು ಸಾಧ್ಯವಾಗಿರುವುದಿಲ್ಲ. ಇದರಿಂದ ರೈತರು ಬೆಳೆದಿರುವ ತೋಟಗಾರಿಕೆ, ಕಬ್ಬು, ಭತ್ತದ ಬೆಳೆಗಳಿಗೆ ನೀರಿಲ್ಲದೆ ಒಣಗುತ್ತಿವೆ ಎಂದು ಪ್ರತಿಭಟನೆ ಮಾಡುತ್ತಿದ್ದಾರೆ.

ಜಲಾಶಯದಲ್ಲಿನ ನೀರಿನ ಸಂಗ್ರಹದ ಆಧಾರದ ಮೇಲೆ ನೀರಿನ ಹಂಚಿಕೆಯಾಗಿದ್ದು ಕಾಲುವೆಗೆ ಅಳವಡಿಸಿರುವ ಅನಧಿಕೃತ ಪಂಪ್‌ಸೆಟ್‌ಗಳನ್ನು ತೆರವು ಮಾಡುವ ಮೂಲಕ ಕಾಲುವೆಯಲ್ಲಿ ಹೆಚ್ಚಿನ ನೀರು ಹರಿಸುವ ಮೂಲಕ ಕೊನೆ ಭಾಗಕ್ಕೆ ನೀರು ತೆಗೆದುಕೊಂಡು ಹೋಗಬೇಕಾಗಿದೆ



ಜಿಲ್ಲಾಧಿಕಾರಿಯವರು ತಿಳಿಸಿದರು.

ಈಗಿನ ವೇಳಾಪಟ್ಟಿಯಂತೆ ಫೆಬ್ರವರಿ 28 ರ ವರೆಗೆ ನೀರು ಬಿಡಲಾಗುತ್ತಿದ್ದು ಇದನ್ನು ಕೆಲವು ದಿನ ಮುಂದುವರೆಸಲು ಸಚಿವರ ಗಮನಕ್ಕೆ ತರಲಾಗುತ್ತದೆ. ಮತ್ತು ಕಾಲುವೆಯಲ್ಲಿ ಹೆಚ್ಚಿನ ಕ್ಯೂಸೆಕ್ಸ್ ನೀರು ಹರಿಸಲು ಮತ್ತು ಭದ್ರಾವತಿ ಭಾಗದಲ್ಲಿ ಅನಧಿಕೃತವಾಗಿ ಹಾಕಿರುವ ಕೊಳವೆಬಾವಿ ತೆರವಿಗೂ ಮನವಿ ಮಾಡಲಾಗುತ್ತದೆ. ಕಾಲುವೆ ಮೇಲ್ಭಾಗದಲ್ಲಿನ ರೈತರಿಗೆ ಸಾಕಷ್ಟು ನೀರು ಲಭ್ಯವಾಗಿದ್ದು ಕೊನೆ ಭಾಗದ ರೈತರ ಹಿತದೃಷ್ಟಿಯಿಂದ ನೀರನ್ನು ಬಳಕೆ ಮಾಡದಂತೆ ಮನವಿ ಮಾಡಲಾಗುತ್ತದೆ ಎಂದರು. ಚನ್ನಗಿರಿ ತಾ; ಸೇರಿದಂತೆ ಕಾಲುವೆಯ ಅಕ್ಕಪಕ್ಕದಲ್ಲಿ ಅನಧಿಕೃತವಾಗಿ ಪಂಪ್‌ಸೆಟ್ ಅಳವಡಿಸಿರುವುದನ್ನು ಈಗಾಗಲೇ ತೆರವಿಗೆ ಸೂಚನೆ ನೀಡಲಾಗಿದೆ. ವಿದ್ಯುತ್ ಸರಬರಾಜು ನಿಲ್ಲಿಸಲಾಗಿದೆ. ಆದರೂ ಸಹ ನೀರೆತ್ತಿದರೆ ಪಂಪ್‌ಸೆಟ್ ವಶಕ್ಕೆ ಪಡೆಯಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್ ಮಾತನಾಡಿ ಕಾಲುವೆಯಲ್ಲಿ ಹೂಳೆತ್ತಲು ಖಾತರಿಯಡಿ 4 ಲಕ್ಷ ಮಾನವದಿನಗಳ ಸೃಜನೆಗೆ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆ ಎಂದರು. ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯ ಉಪಾಧ್ಯಕ್ಷ ತೇಜಸ್ವಿ ಪಟೇಲ್, ರೈತ ಮುಖಂಡರಾದ ಕೆ.ಎನ್.ಮಂಜುನಾಥ್, ಹನುಮಂತಪ್ಪ, ಕೋಳೇನಹಳ್ಳಿ ಸತೀಶ್, ಧನಂಜಯ ಕಡ್ಲೆಬಾಳು, ಮಲ್ಲೇಶಪ್ಪ ಈ ರೈತರು ಸಭೆಯಲ್ಲಿ ಮಾತನಾಡಿದರು.

ಹೆಚ್ಚುವರಿ ರಕ್ಷಣಾಧಿಕಾರಿ ವಿಜಯಕುಮಾರ್ ಎಂ.ಸಂತೋಷ್, ಉಪವಿಭಾಗಾಧಿಕಾರಿ ದುರ್ಗಶ್ರೀ, ಹರ್ಷ, ನೀರಾವರಿ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಮಂಜುನಾಥ್, ಬೆಸ್ಕಾಂ ಇ.ಇ ಪಾಟೀಲ್ ಹಾಗೂ ವಿವಿಧ ರೈತರು ಸಭೆಯಲ್ಲಿ ಉಪಸ್ಥಿತರಿದ್ದರು.

# ಶಿಕ್ಷಕರು ವಿದ್ಯಾರ್ಥಿಗಳ ಬೆಳವಣಿಗೆಗೆ ಶ್ರಮಿಸಬೇಕು




» ದಾವಣಗೆರೆ

ಇಂದು ಕೈಗಾರಿಕೆಗಳಿಗೆ ಅಗತ್ಯವಿರುವ ತರಬೇತಿಯನ್ನು ವಿದ್ಯಾರ್ಥಿಗಳು ಶಿಕ್ಷಕರಿಗೆ ನೀಡಬೇಕು ಎಂದು ರಾಜಶೇಖರ್ ಸಲಹೆ ನೀಡಿದರು.

ಸಪ್ತಗಿರಿ ಎನ್‌ಪಿಎಸ್ ವಿಶ್ವವಿದ್ಯಾಲಯದವತಿಯಿಂದ ನಗರದ ಚೇತನಾ ಹೋಟೆಲ್‌ನಲ್ಲಿ ಗುರುವಾರ ನಡೆದ ಗುರಭ್ಯೋ ನಮಃ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಇಂದು ಶೇ 80ರಷ್ಟು ವಿದ್ಯಾರ್ಥಿಗಳಲ್ಲಿ ಕೌಶಲದ ಕೊರತೆ ಇದೆ. ಕಂಪೆನಿಗೆ ಏನೋ ಬೇಕೋ ಅದನ್ನು ಕಾಲೇಜಿನಲ್ಲಿ ನೀಡಬೇಕು. ಶಿಕ್ಷಕರು ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಶ್ರಮಿಸಬೇಕು. ಒಳ್ಳೆಯ ಶಿಕ್ಷಕರು ಮಾತ್ರ ಉತ್ತಮ ವಿದ್ಯಾರ್ಥಿಗಳನ್ನು ರೂಪಿಸಲು ಸಾಧ್ಯ. ಶಿಕ್ಷಕರು ಕೆಲಸ ಎಂದುಕೊಳ್ಳದೇ ಸೇವೆ ಎಂದು ಕಾರ್ಯನಿರ್ವಹಿಸಿದರೆ ಅಭಿವೃದ್ಧಿ ಸಾಧ್ಯ. ಗುಣಮಟ್ಟದ ಶಿಕ್ಷಣದ ಬಗ್ಗೆ ಇಂದು ಚರ್ಚೆಯಾಗಬೇಕಿದೆ ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಎಸ್‌ಪಿಎಸ್‌ಎಂ ಪಿಯು ಕಾಲೇಜಿನ ಪ್ರಾಂಶುಪಾಲರಾದ ಎಂ.ಎಸ್.ಮಲ್ಲಿಕಾರ್ಜುನ್, ಭದ್ರಾ ಪಿಯು ಕಾಲೇಜಿನ ಚಂದ್ರಪ್ಪ, ನೂತನ ಸ್ವತಂತ್ರ ಕಾಲೇಜಿನ ಚೇತನ್ ಬಿ.ಜೆ., ಮಾಗನೂರು ಬಸಪ್ಪ ಕಾಲೇಜಿನ ಪ್ರಸಾದ್ ಬಂಗೇರ, ಸಿದ್ಧಗಂಗಾ ಪಿಯು ಕಾಲೇಜಿನ ವಾಣಿಶ್ರೀ, ಸೈನ್ಸ್ ಅಕಾಡೆಮಿಯ ಪ್ರದೀಪ್ ಕೆ.ವಿ., ಭದ್ರಾ ಪಿಯು ಕಾಲೇಜಿನ ಡಾ.ಧನಂಜಯ್ ಬಿ.ಎನ್ ಅವರನ್ನು ಸನ್ಮಾನಿಸಲಾಯಿತು.ಸತೀಶ್ ಗಾಂವಕರ್, ಉಮೇಶ್‌ಕುಮಾರ್ ಇತರರು ಕಾರ್ಯಕ್ರಮದಲ್ಲಿ ಇದ್ದರು.

**ಪ್ರಮುಖ ಸುದ್ದಿ**


# ಚಂದ್ರಶೇಖರ್ ಅವಧಿಯಲಿ ನೇಮಕಗೊಂಡ ಪೊಲೀಸರಿಂದ ಕೃತಜ್ಞತೆ

» ಚಿತ್ರದುರ್ಗ

ಪೊಲೀಸ್ ಪೇದೆಗಳನ್ನು ನೇಮಕ ಮಾಡಿಕೊಳ್ಳುವ ಪವಿತ್ರವಾದ ಜವಾಬ್ದಾರಿಯನ್ನು ಸರ್ಕಾರ ನೀಡಿದ್ದರಿಂದ ಯಾರಿಗೂ ವಂಚನೆ ಮೋಸವಾಗಬಾರದೆಂದು ಪಾರದರ್ಶಕವಾಗಿ ಆಯ್ಕೆ ಮಾಡಿದರೂ ಸಾಕಷ್ಟು ದುಃಖ ನೋವು ಅನುಭವಿಸಿದ್ದೇನೆಂದು ಸಿ.ಚಂದ್ರಶೇಖರ್ ಬೇಸರ ವ್ಯಕ್ತಪಡಿಸಿದರು.

1993 ರಲ್ಲಿ ಚಿತ್ರದುರ್ಗ ರಕ್ಷಣಾಧಿಕಾರಿಯಾಗಿದ್ದ ಸಂದರ್ಭದಲ್ಲಿ ನೇಮಕಗೊಳಿಸಿದ 96 ಪೊಲೀಸರಿಂದ ಜೋಗಿಮಟ್ಟಿ ಗಿರಿಧಾಮದಲ್ಲಿ ಶುಕ್ರವಾರ ಕೃತಜ್ಞತೆ ಸ್ವೀಕರಿಸಿ ಮಾತನಾಡಿದರು.

ಮೊದಲು ಎಸ್ಪಿ.ಯಾಗಿ ಚಿತ್ರದುರ್ಗದಲ್ಲಿ ಕೆಲಸ ಮಾಡಿದೆ. ಆದರೆ ಇಲ್ಲಿಗೆ ನಾನು ಖುಷಿಯಿಂದ ಬರಲಿಲ್ಲ. ಕಲ್ಲು ಬಂಡೆಗಳ ಊರು ಎಂದು ಬೇಸರಪಟ್ಟುಕೊಂಡಿದ್ದೆ. ಎಲ್ಲಾದರೂ ಹಚ್ಚ ಹಸಿರಿರುವ ಜಿಲ್ಲೆಗೆ ಹೋಗಿದ್ದರೆ ಚನ್ನಾಗಿತ್ತು ಎಂದುಕೊಂಡೆ. ಆಗ ಸರ್ಕಾರ ಪೊಲೀಸ್ ಪೇದೆಗಳನ್ನು ನೇಮಕ ಮಾಡುವ ಜವಾಬ್ದಾರಿಯನ್ನು ಎಸ್ಪಿ.ಗಳಿಗೆ ನೀಡಿತ್ತು. ಬೇರೆ ಬೇರೆ ಜಿಲ್ಲೆಗಳಲ್ಲಿ ನೇಮಕದಲ್ಲಿ ಸಾಕಷ್ಟು ಅನಾಚಾರಗಳು ನಡೆದಿದ್ದನ್ನು ಕೇಳಿದ್ದೆ. ಸಾರ್ವಜನಿಕರಿಗೆ ನೇರವಾಗಿ ಸಂಬಂಧಪಡುವ ಇಲಾಖೆ ಯಾವುದಾದರೂ ಇದ್ದರೆ ಅದು ಪೊಲೀಸ್ ಇಲಾಖೆ ಎನ್ನುವುದು ಮನಸ್ಸಿಗೆ ಬಂದಿದ್ದರಿಂದ ನಿಸ್ಪಕ್ಷಪಾತ, ಪ್ರಾಮಾಣಿಕವಾಗಿ ಪೊಲೀಸರನ್ನು ನೇಮಕ ಮಾಡಿದ ತೃಪ್ತಿಯಿದೆ. ಆದರೂ ನನ್ನನ್ನು ಅಪರಾಧಿಸ್ಥಾನದಲ್ಲಿನಿಲ್ಲಿಸಿದೊಡ್ಡಮಟ್ಟದಲ್ಲಿ ವಿಚಾರಣೆ ನಡೆಸಿದಾಗ ನೇಮಕಾತಿಯಲ್ಲಿ ಯಾವುದೇ ಅಕ್ರಮವಾಗಿಲ್ಲ ಎನ್ನುವುದು ಸಾಬೀತಾಯಿತು ಎಂದು ಹೇಳಿದರು.



ಪೊಲೀಸ್ ನೇಮಕಾತಿಯಲ್ಲಿ ಎರಡು ಸಂಘರ್ಷಗಳನ್ನು ಎದುರಿಸಿದೆ. ಒಂದು ಕಾನೂನು ಮತ್ತೊಂದು ವ್ಯಕ್ತಿಗತ. ನೇಮಕಾತಿ ವಿರುದ್ಧ 41 ರಿಟ್ ಪಿಟಿಷನ್‌ಗಳಾಯಿತು. ಯಾರ ಫೋನ್‌ಗೂ ಸಿಗದೆ ಗೆಸ್ಟ್‌ಹೌಸ್‌ನಲ್ಲಿ ಕುಳಿತು ಪಟ್ಟಿ ಸಿದ್ದಪಡಿಸಿದೆ. ಸರ್ಕಾರ ಆದೇಶ ಕಾನೂನು ಮೀರಿ ನೇಮಕ ಮಾಡಿಕೊಳ್ಳಲಿಲ್ಲ. ಯಾರಿಗೂ ಅನ್ಯಾಯ ಮಾಡಿಲ್ಲ ಎನ್ನುವ ಆತ್ಮತೃಪ್ತಿಯಿದೆ ಎಂದು ತಮ್ಮ ಅನುಭವ ಹಂಚಿಕೊಂಡರು.

ನಿವೃತ್ತ ಡಿ.ವೈ.ಎಸ್ಪಿ. ಭೀಮರೆಡ್ಡಿ ಮಾತನಾಡಿ ಸಿ.ಚಂದ್ರಶೇಖರ್‌ರವರು ಚಿತ್ರದುರ್ಗ ಎಸ್ಪಿ.ಯಾಗಿದ್ದಾಗ ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೆ ಪ್ರಾಮಾಣಿಕತೆಯಿಂದ ಪೊಲೀಸ್ ಪೇದೆಗಳನ್ನು ನೇಮಕ ಮಾಡಿಕೊಂಡು 96 ಮಂದಿಗೆ ಅನ್ನದಾತರಾದರು. ಆಗ ನೇಮಕಗೊಂಡವರೆಲ್ಲಾ ಈಗ ಕುಟುಂಬದೊಂದಿಗೆ ನೆಮ್ಮದಿಯಾಗಿ ಜೀವನ ಮಾಡುತ್ತಿದ್ದಾರೆಂದು ಸಿ.ಚಂದ್ರಶೇಖರ್‌ರವರ ಪ್ರಾಮಾಣಿಕ 'ತೆಯನ್ನು ಗುಣಗಾನ ಮಾಡಿದರು.

ನಿವೃತ್ತ ಡಿ.ವೈ.ಎಸ್ಪಿ. ಬಸವರಾಜ್ ಮಾತನಾಡುತ್ತ ಆಸೆ ಆಮಿಷಗಳಿಗೆ ಬಲಿಯಾಗದೆ ನಿಸ್ಪಕ್ಷಪಾತವಾಗಿ ಸಿ.ಚಂದ್ರಶೇಖರ್‌ರವರು 96 ಪೊಲೀಸರನ್ನು ನೇಮಕ ಮಾಡಿಕೊಂಡರು. ಆತ್ಮ ಮನಸ್ಸಿಗೆ ಮೋಸ ಮಾಡಿಕೊಂಡರೆ ಅದಕ್ಕಿಂತಲೂ ನೀಚ ಕೆಲಸ ಮತ್ತೊಂದಿಲ್ಲ. ಅವರ ಕೈಕೆಳಗೆ ಕೆಲಸ ಮಾಡಿ ಶಹಬ್ಬಾಸ್‌ಗಿರಿ ಪಡೆದುಕೊಂಡಿರುವುದು ನನ್ನ ಪುಣ್ಯ ಎಂದು ಹರ್ಷ ವ್ಯಕ್ತಪಡಿಸಿದರು.

ಮತ್ತೊಬ್ಬ ನಿವೃತ್ತ ಡಿ.ವೈ.ಎಸ್ಪಿ. ಟಿ.ಹೆಚ್.ರಾಜಪ್ಪ ಮಾತನಾಡಿ 96 ಪೊಲೀಸ್ ಪೇದೆಗಳನ್ನು ನೇಮಕ ಮಾಡಿಕೊಂಡು ಜೀವನಕ್ಕೆ ದಾರಿ ಮಾಡಿಕೊಟ್ಟಂತ ಸಿ.ಚಂದ್ರಶೇಖರ್‌ರವರ ಪ್ರಾಮಾಣಿಕತೆಯನ್ನು ಗುರುತಿಸಿ ಸನ್ಮಾನಿಸುತ್ತಿರುವುದು ನಿಜಕ್ಕೂ ಅಪರೂಪವಾದುದು. ಇಂತಹ ಕಾರ್ಯಕ್ರಮವನ್ನು ನನ್ನ ಸೇವಾವಧಿಯಲ್ಲಿ ನೋಡಿಲ್ಲ. ಜಿಲ್ಲಾ ರಕ್ಷಣಾಧಿಕಾರಿಗಳಾಗಿದ್ದ ಸಿ.ಚಂದ್ರಶೇಖರ್ ಚಿತ್ರದುರ್ಗದಿಂದ ಬೆಂಗಳೂರಿಗೆ ಸರ್ಕಾರಿ ಬಸ್‌ನಲ್ಲಿ ಹೋಗುತ್ತಿದ್ದರೆಂದರೆ ಅವರಲ್ಲಿ ಎಂತಹ ಸರಳತೆ ಇತ್ತು ಎನ್ನುವುದನ್ನು ಊಹಿಸಿಕೊಳ್ಳಬಹುದು ಎಂದು ಹೇಳಿದರು.

ಶ್ರೀಮತಿ ರೂಪ ಚಂದ್ರಶೇಖರ್ ವೇದಿಕೆಯಲ್ಲಿದ್ದರು. ಪೊಲೀಸ್ ಪೇದೆಗಳಾಗಿ ನೇಮಕಗೊಂಡು ಸಬ್‌ಇನ್ಸ್‌ಪೆಕ್ಟರ್ ಹಾಗೂ ಇನ್ಸ್‌ಪೆಕ್ಟರ್‌ಗಳಾಗಿರುವ ಅನೇಕರು ಸಿ.ಚಂದ್ರಶೇಖರ್‌ರವರ ದಕ್ಷತೆ ಪ್ರಾಮಾಣಿಕತೆ ಕುರಿತು ಅನಿಸಿಕೆಗಳನ್ನು ತಿಳಿಸಿದರು.

**ಫಾಸ್ಟ್ ನ್ಯೂಸ್**

## ಡಿವೈಡರ್‌ಗೆ ಕಾರು ಡಿಕ್ಕಿ ಶಾಸಕಿ ಸಾವು



» ಹೈದರಾಬಾದ್

ತೆಲಂಗಾಣದ ಬಿಆರ್‌ಎಸ್ ಪಕ್ಷದ ಶಾಸಕಿಯಾಗಿ ಆಯ್ಕೆಯಾಗಿದ್ದ ಲಾಸ್ಯ ನಂದಿತಾ ರಸ್ತೆ ಅಪಘಾತದಲ್ಲಿ ನಿಧನರಾಗಿದ್ದಾರೆ. ಹೈದರಾಬಾದ್‌ನ ಒಆರ್‌ಆರ್‌ನಲ್ಲಿ ರಸ್ತೆ ಅಪಘಾತ ಸಂಭವಿಸಿದ್ದು, ಲಾಸ್ಯ ಅವರ ಕಾರ್ ಡಿವೈಡರ್‌ಗೆ ಡಿಕ್ಕಿಯಾಗಿದೆ. ಕಾರ್ ವೇಗ ಮಿತಿ ಮೀರಿದ್ದು, ಡಿವೈಡರ್‌ಗೆ ಡಿಕ್ಕಿಯಾಗಿ ಲಾಸ್ಯ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಕಾರಿನ ಚಾಲಕ ಗಂಭೀರವಾಗಿ ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ.ಲಾಸ್ಯ ಅವರ ನಿಧನಕ್ಕೆ ಬಿಆರ್‌ಎಸ್ ನಾಯಕರು ಕಂಬನಿ ಮಿಡಿದ್ದಾರೆ. ಸಣ್ಣ ವಯಸ್ಸಿನಲ್ಲಿ ಲಾಸ್ಯ ನಿಧನರಾಗಿದ್ದು ನೋವು ತಂದಿದೆ ಎಂದಿದ್ದಾರೆ. ನಂದಿತಾಗೆ ಹಲವು ದಿನಗಳಿಂದ ಒಂದಲ್ಲಾ ಒಂದು ಸಮಸ್ಯೆ ಬಾಧಿಸುತ್ತಲೇ ಇತ್ತು. ಅಪಘಾತವೊಂದರಲ್ಲಿ ಗಾಯಗೊಂಡಿದ್ದರು. ನಂತರ ಲಿಫ್ಟ್‌ನಲ್ಲಿ ಸಿಕ್ಕುಹಾಕಿಕೊಂಡಿದ್ದರು. ಮತ್ತೊಮ್ಮೆ ಅವರ ಕಾರ್ ಅಪಘಾತಕ್ಕೀಡಾಗಿದ್ದು, ಸ್ವಲ್ಪದರಲ್ಲೇ ಬಚಾವ್ ಆಗಿದ್ದರು. ಆದರೆ ಇದೀಗ ಕಾರ್ ಡಿವೈಡರ್‌ಗೆ ಡಿಕ್ಕಿಯಾಗಿ ಮೃತಪಟ್ಟಿದ್ದಾರೆ.

## ಅನ್ನೇಹಾಳ್ ಗ್ರಾಮದಲ್ಲಿ ಇಂದಿನಿಂದ ಎನ್‌ಎಸ್‌ಎಸ್ ಶಿಬಿರ

» ಚಿತ್ರದುರ್ಗ

ಎಸ್‌ಜೆಎಂ ವಿದ್ಯಾಪೀಠ, ರಾಜ್ಯ ಕಾನೂನು ವಿಶ್ವವಿದ್ಯಾನಿಲಯ, ಎಸ್‌ಜೆಎಂ ಕಾನೂನು ಮಹಾವಿದ್ಯಾಲಯದ ವತಿಯಿಂದ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ವಿಶೇಷ ಶಿಬಿರವನ್ನು ಇದೇ ಫೆ.24 ರಿಂದ ಮಾರ್ಚ್ 1 ರವರೆಗೆ ಚಿತ್ರದುರ್ಗ ತಾಲ್ಲೂಕು ಅನ್ನೇಹಾಳ್ ಗ್ರಾಮದಲ್ಲಿ ಆಯೋಜಿಸಲಾಗಿದೆ. ಫೆ.24ರಂದು ಸಂಜೆ 6.30ಕ್ಕೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಶಿಬಿರಾರ್ಥಿಗಳಿಂದ ಪಥ ಸಂಚಲನ ನಡೆಯಲಿದೆ. ನಂತರ ಎನ್‌ಎಸ್‌ಎಸ್ ಶಿಬಿರದ ಉದ್ಘಾಟನಾ ಸಮಾರಂಭ ನಡೆಯಲಿದ್ದು, ಶ್ರೀ ಬೃಹನ್ಮಠದ ಉಸ್ತುವಾರಿ ಬಸವಪ್ರಭು ಸ್ವಾಮೀಜಿ ಉದ್ಘಾಟನೆ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಎಸ್‌ಜೆಎಂ ವಿದ್ಯಾಪೀಠದ ಕಾರ್ಯದರ್ಶಿ ಎ.ಜೆ.ಪರಮಶಿವಯ್ಯ, ಅನ್ನೇಹಾಳ್ ಗ್ರಾಮ ಪಂಚಾಯಿತಿ ಅಧ್ಯಕ್ಷೆ ದೇವಮ್ಮ, ರಾಜ್ಯ ಕಾನೂನು ವಿಶ್ವವಿದ್ಯಾಲಯ ಎನ್‌ಎಸ್‌ಎಸ್ ಸಂಯೋಜಕ ಐ.ಬಿ.ಬಿರಾದಾರ್, ಕೆಡಿಪಿ ಸದಸ್ಯ ಕೆ.ಸಿ.ನಾಗರಾಜ್, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಸದಸ್ಯ ಹುರುಳಿ ಎಂ.ಬಸವರಾಜ್, ಎಸ್‌ಜೆಎಂ ಮಹಿಳಾ ಕಾಲೇಜು ಪ್ರಾಂಶುಪಾಲ ಈಶ್ವರಪ್ಪ, ಅನ್ನೇಹಾಳ್ ಗ್ರಾ.ಪಂ ಪಿಡಿಓ ಅಂಜಿನಪ್ಪ ಭಾಗವಹಿಸುವರು. ಎಸ್‌ಜೆಎಂ ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲ ಡಾ.ಎಸ್.ದಿನೇಶ್ ಅಧ್ಯಕ್ಷತೆ ವಹಿಸುವರು. ಉದ್ಘಾಟನೆ ಕಾರ್ಯಕ್ರಮದ ನಂತರ ಶಿಬಿರಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

## ಹೊಟ್ಟೆಜ್ಜನಕಪ್ಪಿಲೆ : ಎರಡು ಲಾರಿಗಳ ಡಿಕ್ಕಿ : ಒರ್ವಚಾಲಕ ಸಾವು.

» ಚಳ್ಳಕೆರೆ

ನಗರದ ರಾಷ್ಟ್ರೀಯ ಹೆದ್ದಾರಿಯ ಹೊಟ್ಟಜ್ಜನಕಪ್ಪಿಲೆ ಗ್ರಾಮದ ಬಳಿ ಶುಕ್ರವಾರ ಬೆಳಗ್ಗೆ ಸುಮಾರು 9ರ ಸಮಯದಲ್ಲಿ ಎರಡೂ ಲಾರಿಗಳ ಡಿಕ್ಕಿಯಲ್ಲಿ ಓರ್ವಚಾಲಕ ಚಿಕಿತ್ಸೆ ಫಲಕಾರಿಯಾಗದೇ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದು, ಮತ್ತೊಬ್ಬ ಚಾಲಕ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದಾನೆ.

ಬಳ್ಳಾರಿಯಿಂದ ಹಾಸನಕ್ಕೆ ಪೈಪ್ ಲೋಡ್‌ಮಾಡಿಕೊಂಡು ಹೋಗುತ್ತಿದ್ದ ಲಾರಿಚಾಲಕ ಮಲ್ಲೂರಹಟ್ಟಿಯ ಅಶೋಕ್(50) ಮೃತಪಟ್ಟ ವ್ಯಕ್ತಿಯಾಗಿದ್ದಾನೆ. ಚಳ್ಳಕೆರೆ ಕಡೆಯಿಂದ ಹಿರಿಯೂರು ಕಡೆಗೆ ಲಾರಿಚಾಲನೆ ಮಾಡಿಕೊಂಡು ಹೋಗುವ ಸಂದರ್ಭದಲ್ಲಿ ಆಂಧ್ರಪ್ರದೇಶದಪ್ರಕಾಶ್‌ಜಿಲ್ಲೆಯ ಚಿಂತಲಪಾಲಂ ಕಾಲೋನಿ ನಿವಾಸಿ, ಲಾರಿಚಾಲಕ ಚಿನ್ನರಾಜು ಎಂಬುವವರು ರಸ್ತೆ ನಿಯಮ ಪಾಲಿಸದೆ ಅಡ್ಡಾದಿಡ್ಡಿಯಾಗಿ ಯಾವುದೇ ಸೂಚನೆ ನೀಡದೆ ಬ್ರೇಕ್ ಹಾಕಿದ ಹಿನ್ನೆಲೆಯಲ್ಲಿ ಹಿಂದೆ ಬರುತ್ತಿದ್ದ ಪೈಪ್‌ಲಾರಿ ಸದರಿ ಲಾರಿಗೆ ಅಪ್ಪಳಿಸಿದ್ದು, ಲಾರಿಚಾಲಕ ಅಶೋಕ್ ಕಾಲುಗಳು ಕಟ್ಟಾಗಿ, ಮೈಕೈಗೆ ರಕ್ತಗಾಯಗೊಂಡಿದ್ದ ಆತನನ್ನು ಚಳ್ಳಕೆರೆ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಹೆಚ್ಚಿನ ಚಿಕಿತ್ಸೆಗೆ ದಾಖಲಿಸುವಾಗ ಮಾರ್ಗಮಧ್ಯೆ ಮೃತಪಟ್ಟಿರುತ್ತಾನೆ. ಮೃತನ ಅಣ್ಣ ಬನಶಂಕರಪ್ಪ ಪೊಲೀಸರಿಗೆ ದೂರು ನೀಡಿದ್ದು, ಪಿಎಸ್‌ಐ ಜೆ.ಶಿವರಾಜ್ ಪ್ರಕರಣ ದಾಖಲಿಸಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T